ವಿಜಯಪುರ | ಸಂಪುಟ 02 | ಸಂಚಿಕೆ 207 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶುಕ್ರವಾರ, ಅಕ್ಟೋಬರ್ 11, 2024

" ವಾಲ್ಮೀಕಿ, ಮುಡಾ ಹಗರಣ ಸಂಬಂಧಿಸಿದಂತೆ ಮೈಸೂರಿನವರೆಗೆ ಪಾದಯಾತ್ರೆ ಮಾಡಿದ ಪರಿಣಾಮ ನಮಗೆ ಮೊದಲ ಜಯ ಸಿಕ್ಕಿದೆ. ಈಗಾಗಲೇ ಸಿಎಂ ಕುರ್ಚಿ ಅಲುಗಾಡುತ್ತಿದ್ದು, ಸಿದ್ದರಾಮಯ್ಯ ಅವರ ಭಂಡತನ ಬಹಳ ದಿನ ನಡೆಯೋದಿಲ್ಲ. ಅವರು ರಾಜೀನಾಮೆ ಕೊಡುವುದು ನಿಶ್ಚಿತ."



■ ಬಿ.ವೈ.ವಿಜಯೇಂದ್ರ
ರಾಜ್ಯ ಬಿಜೆಪಿ ಅಧ್ಯಕ್ಷರು

## ಪ್ರಭಾರ ಶಿಕ್ಷಕನ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ತಾಲೂಕಿನ ಗುಡಿಗಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಸಂಗಮೇಶ ನವಲಿ ಅವರನ್ನು ಕೂಡಲೇ ಅಮಾನತ್ತುಗೊಳಿಸಬೇಕು. ಇಲ್ಲದಿದ್ದಲ್ಲಿ ಲೋಕಾಯುಕ್ತರಿಗೆ ದೂರು ನೀಡಿ ಉಪನಿರ್ದೇಶಕರ ಕಚೇರಿಯ ಎದುರು ಧರಣಿ ನಡೆಸುತ್ತೇವೆ ಎಂದು ಗ್ರಾಮಸ್ಥರು ಉಪನಿರ್ದೇಶಕರಿಗೆ ದೂರಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿದ ಗ್ರಾಮಸ್ಥ ಅಪ್ಪುಗೌಡ ಮಾಡಗಿ ಕಳೆದ ಕೆಲವು ದಿನಗಳ ಹಿಂದೆ ತಾಲೂಕಿನ ಗುಡಿಹಾಳ ಗ್ರಾಮದ ಪ್ರಭಾರಿ ಶಿಕ್ಷಕ ವಿದ್ಯಾರ್ಥಿಗಳಿಗೆ ಮೊಟ್ಟೆ ಕೊಟ್ಟಿಲ್ಲ ಅಂತಾ ದಿಢೀರ ಧರಣಿ ನಡೆಸಿದ್ದರು. ಈ ಬಗ್ಗೆ ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಎಂ.ಎಂ.ಬೆಳಗಲ್ಲ ಭೇಟಿ ನೀಡಿ ಮುಖ್ಯಾಧಿಕಾರಿಯ ಆರೋಪ ಸಾಬೀತಾದ ಬಗ್ಗೆ ವರದಿ ನೀಡಿದ್ದಾರೆ. ಅಲ್ಲದೇ ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಹ ವರದಿ ನೀಡಿದ್ದು ಉಪನಿರ್ದೇಶಕರು ಮಾತ್ರ ಪ್ರಭಾರ ಮುಖ್ಯ ಶಿಕ್ಷಕನ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಹಿಂದೇಟು ಹಾಕುತ್ತಿದ್ದಾರೆ. ಕಾರಣ ನಾವೇ ಖುದ್ದಾಗಿ ಕಚೇರಿಗೆ ಭೇಟಿ ನೀಡಿ ಮನವಿ ನೀಡಿದ್ದೇವೆ. ಕೂಡಲೇ ಕ್ರಮ ವಹಿಸದಿದ್ದಲ್ಲಿ ಕಚೇರಿಯ ಎದುರು ಹೋರಾಟ ನಡೆಸುತ್ತೇವೆ ಎಂದರು.

ಪ್ರಭಾರ ಮುಖ್ಯ ಶಿಕ್ಷಕ ಶಾಲೆಗೆ ಮದ್ಯಾಹ್ನ12ಕ್ಕೆ ಬಂದು 2ಗಂಟೆಗೆ ತೆರಳುತ್ತಾರೆ, ವಿದ್ಯಾರ್ಥಿಗಳಿಗೆ ಮೊಟ್ಟೆ ಕೊಡೋದಿಲ್ಲ, ಎಲ್‌ಸಿ ನೀಡಲು ಹಣ-ಕ್ಕೆ ಪೀಡಿಸುತ್ತಾರೆ, ಮಹಾನ್ ಪುರುಷರ ಜಯಂತಿಗಳನ್ನು ಶಾಲೆಯಲ್ಲಿ ಆಚರಿಸುವದಿಲ್ಲ. ಸೇರಿದಂತೆ ಹಲವು ಆರೋಪಗಳನ್ನು ಮನವಿ ಪತ್ರದಲ್ಲಿ ತಿಳಿಸಲಾಗಿದೆ.

ಮನವಿ ಪತ್ರಕ್ಕೆ ಶಾಲೆಯ ಭೂ ದಾನಿ ಪ್ರಭುಗೌಡ ಪಾಟೀಲ, ಎಸ್.ಡಿ.ಎಂ.ಸಿ ಅಧ್ಯಕ್ಷ ಶಾಂತಗೌಡ ಮಾಡಗಿ, ಸದಸ್ಯರಾದ ಭೀಮನಗೌಡ ದೋರನಹಳ್ಳಿ, ಇಬ್ರಾಹಿಂ ಶೇಖ ಗ್ರಾಮಸ್ಥರಾದ ಮರೆಪ್ಪ ತಾಳಿಕೋಟಿ, ಮಲ್ಲು ಲಿಂಗದಳ್ಳಿ, ಯಮನಪ್ಪ ಮಾದರ ಸಹಿ ಹಾಕಿದ್ದಾರೆ.

## ಗ್ರಹಲಕ್ಷ್ಮಿ ಹಣದಿಂದ ದೇವಿಗೆ ಬೆಳ್ಳಿ ಕಿರೀಟ ಅರ್ಪಿಸಿದ ದಂಪತಿ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ತಾಲೂಕಿನ ಹೂವಿನಹಳ್ಳಿ ಗ್ರಾಮದ ಭಾಗಮ್ಮ ಗುರುಶಾಂತಗೌಡ ಬಿರಾದಾರ ದಂಪತಿ ತಮಗೆ ಬಂದಂತ 12 ತಿಂಗಳ ಗ್ರಹಲಕ್ಷ್ಮಿ ಹಣವನ್ನು ಕೂಡಿಟ್ಟು ನವರಾತ್ರಿ ನಿಮಿತ್ಯ ಗ್ರಾಮದಲ್ಲಿ ಪ್ರತಿಷ್ಠಾಪಿಸಿರುವ ದೇವಿ ಮೂರ್ತಿಗೆ 250 ಗ್ರಾಮ (25 ತೊಲಿ) ಬೆಳ್ಳಿ ಕೀರಿಟ ಮಾಡಿಸಿ ಮಾದರಿಯಾಗಿದ್ದಾರೆ.

ಈ ವಿಷಯ ತಿಳಿದು ಗ್ರಾಮಕ್ಕೆ ಬೇಟಿ ನೀಡಿದ ಶಾಸಕ ಅಶೊಕ ಮನಗೂಳಿ ದಂಪತಿಯನ್ನು ಸನ್ಮಾನಿಸಿ ಗೌರವಿಸಿದರು.

ನಂತರ ಶಾಸಕ ಅಶೋಕ ಮನಗೂಳಿ ಮಾತನಾಡಿ, ಕಾಂಗ್ರೇಸ್ ಪಕ್ಷ ಚುನಾವಣೆಯಲ್ಲಿ ರಾಜ್ಯದ ಜನರಿಗೆ ಕೊಟ್ಟ ಮಾತಿನಂತೆ ನಡೆದುಕೊಂಡಿದೆ. ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಯ ಲಾಭವನ್ನು ರಾಜ್ಯದ 1.60 ಕೋಟಿ ಫಲಾನುಭವಿಗಳು ಪಡೆದುಕೊಂಡಿದ್ದಾರೆ ಈ ಯೋಜನೆ ಯಾವುದೆ ಕಾರಣ-ಕ್ಕೂ ನಿಲ್ಲುವುದಿಲ್ಲ ಎಂದರು.

ಹುವಿನಹಳ್ಳಿ ಗ್ರಾಮದ ಭಾಗಮ್ಮ ದಂಪತಿ ತಮಗೆ ಬಂದಂತ ಗ್ರಹಲಕ್ಷ್ಮಿ ಹಣದಿಂದ ನವರಾತ್ರಿ ನಿಮಿತ್ಯ ಪ್ರತಿಷ್ಠಾಪಿಸಿರುವ ದೇವಿ ಮೂರ್ತಿಗೆ 250 ಗ್ರಾಮ ಬೆಳ್ಳಿ ಕೀರಿಟ ಅರ್ಪಿಸಿದ್ದು ಅವರ ಈ ಕಾರ್ಯವನ್ನು ರಾಜ್ಯದ ಇತಿಹಾಸದ ಪುಟಗಳಲ್ಲಿ ಅಜರಾಮರವಾಗಿ ಉಳಿಯಲಿದೆ.

ಹಾಗೂ ಭಾಗಮ್ಮ ದಂಪತಿ ಸೇವಾ ಕಾರ್ಯಕ್ಕೆರಾಜ್ಯದಲ್ಲಿಯೆ ಪ್ರೇರಣೆಯಾಗಿದ್ದಾರೆ ಎಂದರು.

ಡಾ। ಶ್ರೀಶೈಲ ಪಾಟೀಲ, ಆಲಮೇಲ ಪ.ಪಂ ಅಧ್ಯಕ್ಷ ಸಾಧೀಕ ಸುಂಬಡ ಮಾತನಾಡಿದರು.

ಪ.ಪಂ ಸದಸ್ಯ ಅಶೋಕ ಕೊಳಾರಿ, ಗ್ರಾಮದ ಹಿರಿಯರಾದ ಮಲಕನಗೌಡ ಪಾಟೀಲ, ಯಲ್ಲಪ್ಪ ಬುರಡ, ಅವಧೂತ ಬಂಡಗಾರ, ವಾಹಬ ಸುಂಬಡ, ಸೈಪನ ಪ್ಯಾಟಿ, ಜೀಲಾನಿ ನಾಟೀಕಾರ, ಅಪ್ಪುಗೌಡ ಪಾಟೀಲ, ಗುರು ಕಣ್ಣಿ ಮುಂತಾದವರು ಇದ್ದರು.

## ಗ್ರಂಥಾಲಯ ಸ್ಥಳ ವೀಕ್ಷಣೆ ಮಾಡಿದ ಡಿಸಿ ಟಿ. ಭೂಬಾಲನ್



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಸವನ ಬಾಗೇವಾಡಿಯಲ್ಲಿ ಹೊಸದಾಗಿ ಗ್ರಂಥಾಲಯ ನಿರ್ಮಾಣವಾಗುವ ಕುರಿತು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಗುರುವಾರ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಗ್ರಂಥಾಲಯ ಕಟ್ಟಡದಲ್ಲಿ ಸಾಕಷ್ಟು ಗಾಳಿ ಬೆಳಕು ಬರುವಂತೆ, ಕುಡಿಯುವ ನೀರು, ಶೌಚಾಲಯ, ಪಾರ್ಕಿಂಗ್, ಅಗತ್ಯ ಮೂಲಭೂತ ಸೌಕರ್ಯಕ್ಕೆ ಆದ್ಯತೆ ನೀಡಿ ನಿರ್ಮಾಣ ಯೋಜನೆ ಸಿದ್ಧಪಡಿಸಿಕೊಳ್ಳಬೇಕು ಎಂದು ಸೂಚನೆ ನೀಡಿದರು. ನಗರದಲ್ಲಿ ರಸ್ತೆ ಒತ್ತುವರಿ ತೆರವುಗೊಳಿಸಲು ಸೂಚನೆ ನೀಡಿದ ಅವರು, ಸಾರ್ವಜನಿಕ-ರಿಗೆ ತೊಂದರೆಯಾಗದಂತೆ ಒತ್ತುವರಿ ತಡೆಗೆ ಅಗತ್ಯ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಬೇಕು ಎಂದು ಸೂಚಿಸಿದರು.

ತಹಶೀಲ್ದಾರ ಕಚೇರಿಗೆ ಭೇಟಿ ನೀಡಿ, ಬಾಕಿ ಕಡತಗಳ ಪರಿಶೀಲನೆ, ಆಧಾರ ನೋಂದಣಿ, ಭೂಮಿ ಪ್ರಗತಿ, ಮೋಜಣಿ ಕಡತ, ದಾಖಲೆಗಳನ್ನು ಆಧಾರದೊಂದಿಗೆ ಜೋಡಣೆ ಪ್ರಗತಿ ಮಾಹಿತಿ ಹಾಗೂ ಕಡತಗಳ ವಿಲೇವಾರಿ ಪ್ರಕ್ರಿಯೆಗಳನ್ನು ಪರಿಶೀಲಿಸಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಕಾಧಿಕಾರಿ ರಿಷಿ ಆನಂದ, ಬಸವನ ಬಾಗೇವಾಡಿ ತಹಶೀಲ್ದಾರ್ ವಾಯ್.ಎಸ್. ಸೋಮನಕಟ್ಟಿ, ಪುರಸಭೆ ಮುಖ್ಯಾಧಿಕಾರಿ ಎಚ್. ಎಸ್. ಚಿತ್ತರಗಿ ಸೇರಿದಂತೆ ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಜಾತಿ ಗಣತಿ ಅಸ್ತ್ರಕ್ಕೆ ಪ್ರತ್ಯಾಸ್ತ್ರ ಹೂಡಿದ ಬಿಜೆಪಿ | ರಾಜ್ಯವ್ಯಾಪಿ ಜನಾಂದೋಲನ ನಡೆಸಲು ನಿರ್ಧಾರ | ಮುಡಾ ಹಗರಣ ಮರೆ ಮಾಚಲು ಜಾತಿಗಣತಿ ಮುನ್ನಲೆಗೆ ಆರೋಪ

# ಒಳಮೀಸಲಾತಿ ಜಾರಿಗೆ ತರುವಂತೆ ಬಿಜೆಪಿ ಆಗ್ರಹ

ಬೆಂಗಳೂರು: ಮುಡಾ ಹಗರಣ ಮರೆ ಮಾಚಲು ಜಾತಿಗಣತಿ ಮುನ್ನಲೆಗೆ ತಂದಿದ್ದಾರೆಂದು ಕಾಂಗ್ರೆಸ್ ನಾಯಕರ ವಿರುದ್ಧ ಗುಡುಗಿರುವ ಬಿಜೆಪಿ ಇದೀಗ ಬ್ರಹ್ಮಾಸ್ತ್ರವೊಂದನ್ನು ಪ್ರಯೋಗಿಸಲು ಮುಂದಾಗಿದೆ.

ಜಾತಿಗಣತಿ ವರದಿ ಮಂಡನೆ ಕುರಿತು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲು ಸರ್ಕಾರ ನಿರ್ಧರಿಸಿರುವ ಹಿನ್ನೆಲೆಯಲ್ಲಿ ಇದೇ ವೇಳೆ ಒಳ ಮೀಸಲಾತಿ ಜಾರಿ ತರುವಂತೆ ಆಗ್ರಹಿಸಿ ರಾಜ್ಯವ್ಯಾಪಿ ಜನಾಂದೋಲನ ನಡೆಸಲು ಬಿಜೆಪಿ ಮಾಸ್ಟರ್ ಪ್ಲ್ಯಾನ್ ಮಾಡಿದೆ. ಸುದ್ದಿಗಾರರೊಂದಿಗೆ ಮಾತನಾಡಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು, ಜಾತಿ ಗಣತಿ ವಿಚಾರದಲ್ಲಿ ಕಾಂಗ್ರೆಸ್ಸಿಗರು ಬಿಜೆಪಿ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಆದರೆ, ಯಾರೂ ಮನೆಗೆ ಬಂದೇ ಇಲ್ಲ ಎಂಬುದಾಗಿ ಲಿಂಗಾಯತ, ಒಕ್ಕಲಿಗ ಸೇರಿದಂತೆ ಇತರೆ ಸಮುದಾಯದವರು ತಿಳಿಸಿದ್ದಾರೆ. ಕೆಲವೇ ಜಾತಿಗಳ ವೈಭವೀಕರಣ ಮತ್ತು ಇನ್ನೂ ಕೆಲವು ಜಾತಿಗಳ ಮೇಲೆ ದ್ವೇಷ ಮತ್ತು ಅವೈಜ್ಞಾನಿಕತೆ ಕಂಡು ಬಂದಿದೆ ಎಂದು ಆರೋಪಿಸಿದರು.

**ಸಾಮಾಜಿಕ ನ್ಯಾಯ ನೀಡಿದ್ದೇ ಬಿಜೆಪಿ**

ಒಳ ಮೀಸಲಾತಿ ಕುರಿತು ಸುಪ್ರೀಂ ಕೋರ್ಟ್ ಆದೇಶ ಮಾಡಿದೆ. ಹಿಂದಿನ ಬಿಜೆಪಿ ಸರ್ಕಾರ ಈ ಕುರಿತು ಪ್ರಯತ್ನ ಮಾಡಿತ್ತು. ಮೀಸಲು ಪ್ರಮಾಣವನ್ನು ಪರಿಶಿಷ್ಟ ಜಾತಿಗೆ ಶೇ.3 ರಿಂದ ಶೇ.7 ಕ್ಕೆ ಏರಿಸಲಾಗಿತ್ತು. ಮೀಸಲಾತಿ ಹೆಚ್ಚಿಸಿ ಸಾಮಾಜಿಕ ನ್ಯಾಯ ನೀಡಿದ್ದೇ ಬಿಜೆಪಿ. ದಲಿತರು, ಹಿಂದುಳಿದವರ ಚಾಂಪಿಯನ್ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಹರ್ಯಾಣ ಚುನಾವಣೆಯಲ್ಲಿ ಸೋತಿದೆ. ಬಿಜೆಪಿ ಎಂದಿಗೂ ಮೀಸಲು ವಿಚಾರದಲ್ಲಿ ಹಿಂದುಳಿದಿಲ್ಲ. ದಲಿತರ ಅಭಿವೃದ್ಧಿಗೆ ಬಿಜೆಪಿ ಸದಾ ಶ್ರಮಿಸಿದೆ. ದಲಿತರ ಪರವಾಗಿ ಕಾಂಗ್ರೆಸ್ ಕೆಲಸ ಮಾಡುತ್ತಿದೆ ಎನ್ನುವುದಾದರೆ ಒಳ ಮೀಸಲಾತಿ ತರಲಿ ಎಂದು ವಿಪಕ್ಷ ನಾಯಕ ಆರ್.ಅಶೋಕ ಸವಾಲು ಹಾಕಿದರು.



## ಅ.13ರಂದು ಸಾರ್ವಜನಿಕ ಬನ್ನಿ ವಿನಿಮಯ : ಬೆಳ್ಳುಬ್ಬಿ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಪ್ರತಿ ವರ್ಷದಂತೆ ಈ ವರ್ಷವೂ ಕೂಡ ವಿಜಯದಶಮಿಯ ಪ್ರಯುಕ್ತ ಬಸವನ ಬಾಗೇವಾಡಿ ಮತಕ್ಷೇತ್ರದ ಮತದಾರ ಬಂಧುಗಳ ಹಾಗೂ ಸಾರ್ವಜನಿಕರ ಸಂಪರ್ಕದೊಂದಿಗೆ ನಡೆಯುವ ಪರಸ್ಪರ ಬನ್ನಿ ವಿನಿಮಯ ಕಾರ್ಯಕ್ರಮವು ಇದೇ ಅ.13 ರವಿವಾರ ದಿವಸ ಕೊಲ್ಹಾರ ಪಟ್ಟಣದ ಸ್ವಗೃಹದಲ್ಲಿ ನಡೆಯಲಿದೆ ಎಂದು ಮಾಜಿ ಸಚಿವ ಎಸ್.ಕೆ.ಬೆಳ್ಳುಬ್ಬಿ ತಿಳಿಸಿದರು.



ಈ ಕುರಿತು ಪತ್ರಿಕಾಗೋಷ್ಠಿ ನಡೆಸಿದ ಅವರು ಎಂದಿನಂತೆ ದಶಕಗಳಿಂದ ನಡೆದುಕೊಂಡು ಬಂದ ಮೈದುಂಬಿ ಹರಿಯುವ ಕೃಷ್ಣಾ ನದಿ ಮಾತೆಗೆ ಗಂಗಾ ಪೂಜೆಯನ್ನು ನೆರವೇರಿಸಲಾಗುವದು ಅಂದು ಗಂಗಾ ಮಾತೆಯು ಭಾವಚಿತ್ರದ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕೊರ್ತಿ ಕೊಲ್ಹಾರ ಸೇತುವೆಯ ದಡದಲ್ಲಿ ಸುಮಂಗಲೆಯರ ಆರತಿ ಬೆಳಗುವದರೊಂದಿಗೆ ನದಿಗೆ ಬಾಗೀನ ಅರ್ಪಿಸಲಾಗುವದು ಎಂದರು.

## ಹುಟ್ಟುಹಬ್ಬ ಆಚರಿಸಿ ಹಬ್ಬದೂಟ ಮಾಡಲು ಬಂದಿಲ್ಲ :ಮೋಮಿನ್

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಶಾಸಕ ಯಶವಂತರಾಯಗೌಡರ ಹುಟ್ಟುಹಬ್ಬ ಆಚರಣೆಯ ನೆಪದಲ್ಲಿ ಹಬ್ಬದೂಟ ಮಾಡಲು ನಾವೆಲ್ಲಾ ಸೇರಿಲ್ಲ. ಈ ನೆಪದಲ್ಲಿ ತಾಲ್ಲೂಕಿನ ಬಡವರ ಸೇವೆ ಮಾಡಲು ಸೇರಿದ್ದೇವೆ ಎಂದು ಇಂಡಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಾವೀದ ಮೋಮಿನ್ ಹೇಳಿದರು.

ಗುರುವಾರ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತದಾನ, ಉಚಿತ ಆರೋಗ್ಯ ತಪಾಸಭೆ ಹಾಗೂ ಸಸಿ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ 2 ವರ್ಷಗಳ ಹಿಂದೆ ಶಾಸಕರ ಹುಟ್ಟುಹಬ್ಬದ ನಿಮಿತ್ಯ ಆಯೋಜಿಸಿದ್ದ ಉಚಿತ ಆರೋಗ್ಯ ಶಿಬಿರದ ಮೂಲಕ ತಾಲ್ಲೂಕಿನ 22 ಜನ ಹೃದಯ ರೋಗಿಗಳಿಗೆ ಉಚಿತವಾಗಿ ಹೃದಯ ರೋಗ ಶಸ್ತ್ರ ಚಿಕಿತ್ಸೆ ಮಾಡಿಸಿದ್ದೇವೆ. ಈ ಸಲ ರಕ್ತ ಸಂಗ್ರಹಣೆ ನಮ್ಮ ಉದ್ದೇಶವಾಗಿದ್ದು, ಶಾಸಕರ 57ನೇ ಹುಟ್ಟುಹಬ್ಬಕ್ಕೆ 57 ಜನ ಯುವಕರು ರಕ್ತದಾನ ಮಾಡಲು ಕಾಯುತ್ತಿದ್ದಾರೆ. ನೂರಾರು ಜನ ತಮ್ಮ ರೋಗ ತಪಾಸಣೆಗೆ ಬಂದಿದ್ದಾರೆ. ಅವರೆಲ್ಲರಿಗೂ ರೋಗ ತಪಾಸಣೆ ಮಾಡಿಸುವದಲ್ಲದೇ ಅವರಿಗೆ ಅಗತ್ಯ ಔಷಧೋಪಚಾರ ನೀಡಲಾಗುವದು ಎಂದರು.

**ಕಾರ್ಯಕ್ರಮದಲ್ಲಿ ಶಾಸಕರ 57 ನೇ ಹುಟ್ಟುಹಬ್ಬದ ನಿಮಿತ್ಯ 57 ಜನ ಯುವಕರು ರಕ್ತದಾನ ಮಾಡಿದರು. 268 ಜನ ತಮ್ಮ ವಿವಿಧ ರೋಗಗಳ ತಪಾಸಣೆ ಮಾಡಿಸಿಕೊಂಡರು. ಕಾರ್ಯಕ್ರಮದ ಅಂಗವಾಗಿ ವಿವಿಧ ಜಾತಿಯ 500 ಹಣ್ಣಿನ ಸಸಿಗಳನ್ನು ಸಾರ್ವಜನಿಕರಿಗೆ ವಿತರಣೆ ಮಾಡಲಾಯಿತು**



### ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಆದೇಶ ಖಂಡಿಸಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ರವರ ನೇತೃತ್ವದಲ್ಲಿ ಪ್ರತಿಭಟನೆ ಗೆ ನಿರ್ಧಾರ

# ಅ.15 ರಂದು ವಿಜಯಪುರದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಅವರು, ವಕ್ಫ್ ಆಸ್ತಿ ಖಾತೆ ಬದಲಾವಣೆ ಹಾಗೂ ಫ್ಲ್ಯಾಗಿಂಗ್ ಮಾಡುವಂತೆ ಅಧಿಕಾರಿಗಳ ಮೇಲೆ ಕೂಗಾಡಿ, 45 ದಿನಗಳಲ್ಲಿ ಪೂರ್ಣಗೊಳಿಸುವಂತೆ ಒತ್ತಡ ಹಾಕಿರುವುದನ್ನು ಖಂಡಿಸಿ, ಕೇಂದ್ರದ ಮಾಜಿ ಸಚಿವರು ಹಾಗೂ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ರವರ ನೇತೃತ್ವದಲ್ಲಿ, ಅ.15 ರ ಮಂಗಳವಾರ ಬೆಳಿಗ್ಗೆ 10.30ಕ್ಕೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಗಾಂಧಿ ಚೌಕ್ ಮಾರ್ಗವಾಗಿ ಜಿಲ್ಲಾಧಿಕಾರಿ ಕಚೇರಿ ವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ಮೂಲಕ ತೆರಳಿ, ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿ, ಪ್ರಧಾನಮಂತ್ರಿ, ಕೇಂದ್ರ ಕಾನೂನು ಸಚಿವರು, ರಾಜ್ಯಪಾಲರು, ಮುಖ್ಯಮಂತ್ರಿ ಅವರಿಗೆ ಮನವಿ ಪತ್ರ ಸಲ್ಲಿಸಲಾಗುವುದು.



ದೇಶಕ್ಕೆ ಮಾರಕವಾದ ಮತ್ತು ಅವೈಜ್ಞಾನಿಕ ವಕ್ಫ್ ಮಸೂದೆ ತಿದ್ದುಪಡಿಗೆ ಕೇಂದ್ರ ಸರ್ಕಾರ ಈಗಾಗಲೇ ಮುಂದಾಗಿದ್ದು, ಅದಕ್ಕಾಗಿ ವಕ್ಫ್ ತಿದ್ದುಪಡಿ ಮಸೂದೆ ಜಂಟಿ ಸಂಸತ್ ಸದನ ಸಮಿತಿ ರಚಿಸಲಾಗಿರುವ ಈ ಸಂದರ್ಭದಲ್ಲಿ, ವಕ್ಫ್ ಸಚಿವರು ಮೌಖಿಕವಾಗಿ ಅಧಿಕಾರಿಗಳಿಗೆ ಬೆದರಿಸಿ, ಒತ್ತಡ ಹಾಕಿ 45 ದಿನದೊಳಗಾಗಿ ಖಾತೆಯಲ್ಲಿ ವಕ್ಫ್ ಆಸ್ತಿ ಎಂದು ನಮೂದಿಸುವಂತೆ ಒತ್ತಡ ಹಾಕಿದನ್ನು ಖಂಡಿಸಿ ಮತ್ತು ಯಾವುದೇ ಅಧಿಕಾರಿಗಳು ಮೌಖಿಕವಾದ ಸಚಿವರ ಆದೇಶವನ್ನು ಪಾಲಿಸಿ ಕಾನೂನು ಬಾಹಿರವಾಗಿ ಯಾವುದೇ ಖಾತೆಯಲ್ಲಿ ವಕ್ಫ್ ಎಂದು ನಮೂದಿಸುವುದನ್ನು ವಿರೋಧಿಸಿ, ಜಿಲ್ಲೆಯಲ್ಲಿರುವ ಸಾವಿರಾರು ಎಕರೆ ಖಾಸಗಿಯವರ ಜಮೀನು, ಸಂಘ-ಸಂಸ್ಥೆಗಳ ಜಮೀನು, ಸರ್ಕಾರಿ ಒಡೆತನದ ಜಮೀನುಗಳನ್ನು ವಕ್ಫ್ ಖಾತೆಯಲ್ಲಿ ವಕ್ಫ್ ಎಂದು ನಮೂದು ಮಾಡದಂತೆ ಒತ್ತಾಯಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಕಾರಣ ಈ ಬೃಹತ್ ಪ್ರತಿಭಟನೆಯಲ್ಲಿ ನಗರವೂ ಸೇರಿದಂತೆ ಜಿಲ್ಲೆಯ ಸಮಸ್ತ ಸನಾತನ ಹಿಂದೂ ಧರ್ಮಿಯರು, ಧಾರ್ಮಿಕ ಮುಖಂಡರು, ಮಠಾಧೀಶರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ನಾಗ-ರೀಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಹೋರಾಟ ಯಶಸ್ವಿಗೊಳಿಸಲು ಶಾಸಕರು ವಿನಂತಿಸಿದ್ದಾರೆ.

## ಜ-ಆಂಖ ತಂತ್ರಾಂಶ ನಿರ್ವಹಣೆ: ತರಬೇತಿ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಾನ್ಯ ಸರ್ವೋಚ್ಚ ನ್ಯಾಯಾಲಯ ಮತ್ತು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ನಿರ್ದೇಶನದಂತೆ ಅಪಘಾತಕ್ಕೆ ಸಂಬಂಧಿಸಿದ ವಿವರವನ್ನು ಎಲ್ಲಾ ಆಸ್ಪತ್ರೆಗಳು ಜ-ಆಂಖ ತಂತ್ರಾಂಶದಲ್ಲಿ (electronic Detailed Accident Reports) ವರದಿ ಮಾಡುವುದು ಕಡ್ಡಾಯವಾಗಿರುತ್ತದೆ. ಈ ಕುರಿತು ಜಿಲ್ಲಾ ಮಾಹಿತಿ ಕೇಂದ್ರ ವಿಜಯಪುರ ವತಿಯಿಂದ ರಸ್ತೆ ಸಂಚಾರ ಅಪಘಾತಗಳನ್ನು ನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳ ಮಾಲೀಕರು, ವೈದ್ಯರು ಸಿಬ್ಬಂದಿಗಳಿಗೆ ಜ-ಆಂಖ ತಂತ್ರಾಂಶದ ನಿರ್ವಹಣೆಯ ಬಗ್ಗೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಸಭಾ ಭವನದಲ್ಲಿ 15-10-2024ರಂದು ವಿಜಯಪುರ ನಗರ ಹಾಗೂ ವಿಜಯಪುರ ತಾಲೂಕು ವ್ಯಾಪ್ತಿಗೆ ಒಳಪಡುವ ಖಾಸಗಿ ಆಸ್ಪತ್ರೆಗಳು, 16-10-2024ರಂದು ಬಸವನ ಬಾಗೇವಾಡಿ, ಮುದ್ದೇಬಿಹಾಳ, ಇಂಡಿ ಹಾಗೂ ಸಿಂದಗಿ ತಾಲೂಕು ವ್ಯಾಪ್ತಿಗೆ ಒಳಪಡುವ ಖಾಸಗಿ ಆಸ್ಪತ್ರೆಗಳ ವೈದ್ಯರು ಸಿಬ್ಬಂದಿಗಳಿಗೆ ಬೆಳಿಗ್ಗೆ 10 ಗಂಟೆಗೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ತರಬೇತಿಗೆ ರಸ್ತೆ ಸಂಚಾರ ಅಪಘಾತ ನಿರ್ವಹಿಸುವ ಎಲ್ಲಾ ಖಾಸಗಿ ಆಸ್ಪತ್ರೆಗಳ ಮಾಲೀಕರು, ವೈದ್ಯರು ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಾಗಬೇಕು. ಸೂಕ್ತ ಕಾರಣ ಹಾಗೂ ಪೂರ್ವಾನುಮತಿಯಿಲ್ಲದೆ ಗೈರು ಹಾಜರಾದ ಆಸ್ಪತ್ರೆಗಳ ಕೆ.ಪಿ.ಎಂ.ಇ.ಎ ನೋಂದಣಿ ಅಮಾನತು ಮಾಡಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಹುದ್ದೆಗಳಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ ನಗರ ವ್ಯಾಪ್ತಿಯಲ್ಲಿ ಖಾಲಿಯಿರುವ 33 ಅಂಗನವಾಡಿ ಕಾರ್ಯಕರ್ತೆ ಹಾಗೂ 186 ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು 09-11-2024 ಕೊನೆಯ ದಿನವಾಗಿದ್ದು, https//karnemakaone.nic.in/abcd ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ವಿಜಯಪುರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಪ್ರಕಟಣೆ ತಿಳಿಸಿದೆ.

# ಮಹಿಳೆಯರ ಸಬಲಿಕರಣಕ್ಕೆ ಹೆಚ್ಚಿನ ಒತ್ತು: ಸಂತೋಷ ಕುಮಾರ ರೈ ಅಭಿಮತ"

ಚಡಚಣ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ವತಿಯಿಂದ ರಾಜ್ಯಾದ್ಯಂತ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅದರಲ್ಲೂ ಮಹಿಳೆಯರ ಸಬಲಿಕರಣಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಲಾಗುತ್ತಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯ ಜಿಲ್ಲಾ ನಿರ್ದೇಶಕರಾದ ಸಂತೋಷ ಕುಮಾರ ರೈ. ಅವರು ಹೇಳಿದರು.

ಚಡಚಣ ಪಟ್ಟಣದ ಗೋಡಿಹಾಳ ರಸ್ತೆಯಲ್ಲಿರುವ ಶ್ರೀ ಗುರು ಕೃಪಾ ಮಂಗಲ ಕಾರ್ಯಾಲಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ(ರಿ) ಇಂಡಿ ಇವರು ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಒಕ್ಕೂಟದ ಪದಾಧಿಕಾರಿಗಳ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಡತನ ರೇಖೆಯಲ್ಲಿರುವ ಗ್ರಾಮೀಣ ಭಾಗದ ಮಹಿಳೆಯರ ಜೀವನ ಮಟ್ಟವನ್ನು ಸುಧಾ– ರಿಸುತ್ತಿದೆ. ಮಹಿಳೆಯರು ಸಂಘದಿಂದ ಸಾಲ– ಸೌಲಭ್ಯವನ್ನು ಪಡೆದು ಕಾಲಮಿತಿಯಲ್ಲೇ ಸರಿಯಾಗಿ ಸಾಲ ಮರುಪಾವತಿಸುವ ಮೂಲಕ ಹೆಚ್ಚಿನ ಸಾಲ ಪಡೆಯಲು ಅವಕಾಶ ಕಲ್ಪಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದ ಅದ್ಯಕ್ಷತೆ ವಹಿಸಿ ಮಾತನಾಡಿದ ಕಾಶೀಬಾಯಿ ವಾಲಿಕಾರ ಅವರು, ಗ್ರಾಮಾಭಿವೃದ್ಧಿ ಯೋಜನೆಯ ಸದಸ್ಯರಾದ ಮೇಲೆ ಮಹಿಳೆಯರು ಸ್ವಾವಲಂಬಿ ಜೀವನ ಸಾಗಿಸುತ್ತಿದ್ದಾರೆ. ಇದರಿಂದ ಸಮಾಜದ ಮುಖ್ಯ ವಾಹಿನಿಗೆ ಮಹಿಳೆಯರು ಬರಲು ಸಾದ್ಯವಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಇಂಡಿ ತಾಲೂಕು ಕ್ಷೇತ್ರ ಯೋಜನಾಧಿಕಾರಿ ನಟರಾಜ ಐ.ಒ ಮಾತನಾಡಿ, ತಾಲೂಕಿನಲ್ಲಿ ಯೋಜನೆಯಿಂದ ನೀಡಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡುವ ಮೂಲಕ ಸಂಘಗಳ ಗುಣಮಟ್ಟವನ್ನು ಕಾಪಾಡಿಕೊಳ್ಳುವಲ್ಲಿ ಪದಾಧಿಕಾರಿಗಳ ಪಾತ್ರ ಬಹಳ ಮುಖ್ಯ ಎಂದು ಹೇಳಿದರು.

ಈ ವೇಳೆ ಜವಳಿ ವರ್ತಕರಾದ ಅಜೀತ ಮುತ್ತಿನ, ನಿವರಗಿಯ ಬ್ಯಾಂಕ ಆಫ್ ಬರೋಡಾ ಶಾಖೆಯ ಸಹಾಯಕ ವ್ಯವಸ್ಥಾಪಕ ವಿಜಯಕುಮಾರ, ಪತ್ರಕರ್ತರಾದ ಸಂಗಮೇಶ ಹೂಗಾರ, ಜಿಲ್ಲಾ ಜನಜಾಗೃತಿ ಸದಸ್ಯರಾದ ರುದ್ರಪ್ಪ ಪೂಜಾರಿ, ಮಾದೇವ ಬಿರಾದಾರ, ಶಿವಣ್ಣ ಪಾಂಡ್ರೆ, ವಲಯಾಧಿಕಾರಿ ಜಗದೇಶ ಕುಂಬಾರ ಸೇರಿದಂತೆ ವಿವಿಧ ಹಂತದ ಅಧಿಕಾರಿಗಳು, ಸೇವಾ ಪ್ರತಿನಿಧಿಗಳು, ವಿವಿಧ ಒಕ್ಕೂಟಗಳ ಸರ್ವ ಸದಸ್ಯರು ಉಪಸ್ಥಿತರಿದ್ದರು.

# ದಿ. 13 ರಂದು ಧಾರವಾಡ ರಡ್ಡಿ ಬ್ಯಾಂಕಿನ ನೂತನ ಕಟ್ಟಡ ಉದ್ಘಾಟನೆ



ಧಾರವಾಡ, : ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳಲ್ಲಿ ಒಂದಾದ ಪ್ರತಿಷ್ಠಿತ ರಡ್ಡಿ ಸಹಕಾರ ಬ್ಯಾಂಕ ಇದೇ ದಿನಾಂಕ 13 ರಂದು ಶತಮಾನೋತ್ಸವ ಸಂಭ್ರಮ ಆಚರಿಸುತ್ತಿದೆ.

ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ ಕೆ.ಎಲ್. ಪಾಟೀಲರು ಹಾಗೂ ಬ್ಯಾಂಕಿನ ನಿರ್ದೇಶಕರು, ಶಾಸಕರಾದ ಎನ್.ಎಚ್.ಕೋನರಡ್ಡಿ ಅವರು ಶತಮಾನೋತ್ಸವ ಸಂಭ್ರದ ವಿವರಗಳನ್ನು ನೀಡಿದರು.

ರವಿವಾರ ಸಾಯಂಕಾಲ 4–00 ಗಂಟೆಗೆ ಬ್ಯಾಂಕಿನ ಪ್ರಧಾನ ಕಛೇರಿಯ ನೂತನ ಕಟ್ಟಡವನ್ನು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಉದ್ಘಾಟಿಸುವರು. ನಂತರ ಬ್ಯಾಂಕಿನಸಂಸ್ಥಾಪಕರಾದಎಫ್.ಟಿ.ನಲವಡಿ ಮತ್ತು ಬ್ಯಾಂಕಿನ ಅಭಿವೃದ್ಧಿ ಹರಿಕಾರರಾದ ಸಹಕಾರರಂಗದ ಭೀಷ್ಮ ಕೆ.ಎಚ್.ಪಾಟೀಲರ ಪುತ್ಥಳಿಗಳ ಅನಾವರಣ ಮಾಡುವರು.

ಸತ್ತೂರಿನ ಶ್ರೀ ಡಿ. ವೀರೇಂದ್ರ ಹೆಗಡೆ ಕಲಾಕ್ಷೇತ್ರದಲ್ಲಿನಡೆಯುವಶತಮಾನೋತ್ಸವ ಸಮಾರಂಭವನ್ನು ಉಪ ಮುಖ್ಯಮಂತ್ರಿಗಳಾದ ಡಿ. ಕೆ. ಶಿವಕುಮಾರ ಉದ್ಘಾಟಿಸುವರು. ಕರ್ನಾಟಕ ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿಅವರು ಕೆ.ಎಚ್.ಪಾಟೀಲ ವಿಚಾರಧಾರೆ ಪುಸ್ತಕ ಬಿಡುಗಡೆ ಮಾಡುವರು. ಕೇಂದ್ರಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾಖಾತೆ ಸಚಿವರಾದ ಪ್ರಲ್ಹಾದ ಜೋಶಿ ಅವರು ಮಹಾಯೋಗಿ ವೇಮನ ಭಾವ ಚಿತ್ರಅನಾವರಣ ಮಾಡುವರು. ಸಹಕಾರಿ ಸಚಿವ ಕೆ.ಎನ್. ರಾಜಣ್ಣ ಸ್ಮರಣ ಸಂಚಿಕೆ ಬಿಡುಗಡೆ ಮಾಡುವರು.ಸಚಿವರಾದರಾಮಲಿಂಗಾರಡ್ಡಿ ಅವರು ಮಹಾಸಾದ್ವಿ ಹೇಮರಡ್ಡಿ ಮಲ್ಲಮ್ಮ ಭಾವಚಿತ್ರಅನಾವರಣ ಮಾಡುವರು.

ಕಾರ್ಮಿಕ, ಮಾಹಿತಿ ಮತ್ತು ಮೂಲ ಸೌಕರ್ಯಖಾತೆ ಸಚಿವರು ಹಾಗೂ ಜಿಲ್ಲಾಉಸ್ತುವಾರಿ ಸಚಿವರಾದ ಸಂತೋಷ ಲಾಡ, ಅಬಕಾರಿ ಸಚಿವರಾದ ಆರ್.ಬಿ. ತಿಮ್ಮಾಪೂರ, ಸಣ್ಣಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶರಣಬಸಪ್ಪ ದರ್ಶನಾಪುರ, ಹೊಸದಿಲ್ಲಿಯ ರಾಷ್ಟ್ರೀಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳದ ಅಧ್ಯಕ್ಷರಾದ ಲಕ್ಷ್ಮೀದಾಸ, ಹೊಸದಿಲ್ಲಿಯ ಅಂಬ್ರೇಲಾ ಸಂಘಟನೆಯ (ಎನ್.ಯು.ಸಿ.ಎಫ್.ಡಿ.ಸಿ.) ಚೇರಮರಾದ ಜ್ಯೋತೀಂದ್ರಭಾಯಿ ಮೆಹ್ತಾ ಭಾಗವಹಿಸಲಿದ್ದಾರೆ.

ಎರೆಹೊಸಳ್ಳಿಯ ಶ್ರೀ ಮಹಾಯೋಗಿ ವೇಮನ ಸಂಸ್ಥಾನ ಮಠದ ಶ್ರೀ ವೇಮನಾನಂದ ಮಹಾಸ್ವಾಮಿಗಳು, ಧಾರವಾಡದ ಮುರಘಾಮಠದ ಡಾ. ಮಲ್ಲಿಕಾರ್ಜುನ ಸ್ವಾಮಿಜಿಗಳ ಸಾನಿಧ್ಯದಲ್ಲಿ ಜರುಗುವ ಈ ಸಮಾರಂಭದ ಅಧ್ಯಕ್ಷತೆಯನ್ನು ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರು, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾ ಮಂಡಳದ ಅಧ್ಯಕ್ಷರು ಮತ್ತುರಾಷ್ಟ್ರೀಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳದ ಚೇರಮಎಮಿರೇಟ್ಸ್ ಎಚ್. ಕೆ.ಪಾಟೀಲರು ವಹಿಸುವರು ಎಂದು ರಡ್ಡಿ ಬ್ಯಾಂಕಿನ ಚೇರಮರಾದ ಕೆ.ಎಲ್. ಪಾಟೀಲರು ಹೇಳಿದರು.ಪತ್ರಿಕಾ ಗೋಷ್ಠಿಯಲ್ಲಿ ಬ್ಯಾಂಕಿನ ಉಪಾಧ್ಯಕ್ಷರಾದ ಕೆ.ಬಿ. ನಾಯಿಕ, ನಿರ್ದೇಶಕರಾದ ವ್ಹಿ.ಡಿ. ಕಾಮರಡ್ಡಿ, ವಕೀಲರು, ಎ.ಜಿ. ಮುಳ್ಳೂರ, ವ್ಯವಸ್ಥಾಪನಾ ಸಮಿತಿ ಸದಸ್ಯರು ಹಾಗೂ ಬ್ಯಾಂಕಿನ ನಿರ್ದೇಶಕರು, ಮುಖ್ಯ ಕಾರ್ಯನಿರ್ವಹಣಾಧಿಕಾರಿ ವ್ಹಿ. ಆರ್ .ನಾಗಾವಿ ಮುಂತಾದವರು ಉಪಸ್ಥಿತರಿದ್ದರು.

# ವಾಲಿಬಾಲ್: ಬಂಜಾರಾ ಬಿಎಡ್ ಕಾಲೇಜ್ ಚಾಂಪಿಯನ್




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಜೆಎಸ್ಎಸ್ ಶಿಕ್ಷಣ ಮಹಾವಿದ್ಯಾಲಯದ ಆವರಣದಲ್ಲಿ ಬುಧವಾರದಂದು ಜರುಗಿದ ಅಂತರ್ ವಲಯ ಮಟ್ಟದ ಪುರುಷರ ವಿಭಾಗದ ವಾಲಿಬಾಲ್ ಸ್ಪರ್ಧೆಯಲ್ಲಿ ನಗರದ ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಬಂಜಾರಾ ಬಿಎಡ್ ಕಾಲೇಜಿನ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ವಿಜಯಶಾಲಿಗಳಾಗುವ ಮೂಲಕ ಚಾಂಪಿಯನ್‌ರಾಗಿ ಹೊರಹೊಮ್ಮಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಡಿ.ಎಲ್. ಚವ್ಹಾಣ್, ಕಾರ್ಯಾಧ್ಯಕ್ಷರಾದ ಕೆ.ಜಿ.ರಾಠೋಡ, ಕಾರ್ಯದರ್ಶಿಗಳಾದ ರಾಜಶೇಖರ ಚವ್ಹಾಣ್, ಕಾಲೇಜು ಪ್ರಾಚಾರ್ಯರು ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ಪ್ರಶಿಕ್ಷಣಾರ್ಥಿಗಳು ಹರ್ಷವ್ಯಕ್ತಪಡಿಸಿದ್ದಾರೆ.

## ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೆಂಗಳೂರು ಇವರ ವತಿಯಿಂದ ಅಂಗವಿಕಲರ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿ, ಸಂಸ್ಥೆ, ಹಾಗೂ ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಮೇಲ್ಪಟ್ಟು ಸೇವೆ ಸಲ್ಲಿಸಿದ/ಸಲ್ಲಿಸುತ್ತಿರುವ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿಗಾಗಿ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು 15–10–2024 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕನಕದಾಸ ಬಡಾವಣೆ, ಜಿಲ್ಲಾ ಪಂಚಾತಯ ಆವರಣ ಅಥವಾ ದೂರವಾಣಿ ಸಂಖ್ಯೆ: 08356–796060ಗೆ ಅಥವಾ ಫಫಫ.ಜತಿಭಿ.ಇಚಿಡಿ.ಟಿಭಿ.ಟಿ ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಶ್ರೀಮತಿ ಸವಿತಾ ಕಾಳೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಗೀತದ ರಸದೌತಣ ನೀಡಿದ ಗುಳೇದಗುಡ್ಡ ತಂಡ

ಗುಳೇದಗುಡ್ಡ, :ವಿಶ್ವವಿಖ್ಯಾತ ಮೈಸೂರು ದಸರಾ ಉತ್ಸವ ಕಾರ್ಯಕ್ರಮದಲ್ಲಿ ಸ್ಥಳೀಯ ಶ್ರೀ ಗೌರಿ ಗಣೇಶ ಸಾಂಸ್ಕೃತಿಕ ಕಲಾ ತಂಡದವರಿಂದ ಮೈಸೂರಿನ ಕಲಾಮಂದಿರದಲ್ಲಿ ಸೋಮವಾರ ಸಂಜೆ ಜಾನಪದ ಸಂಗೀತ ಕಾರ್ಯಕ್ರಮ ಜರುಗಿತು. ಸಂಗೀತ ಶಿಕ್ಷಕ ಬಸವರಾಜ ಸಿಂದಗಿಮಠ, ಜಾನಪದ ಕಲಾವಿದೆ ಪವಿತ್ರಾ ಜಕ್ಕಪ್ಪನವರ, ಸಂಗೀತ ಶಿಕ್ಷಕ ಶ್ರೀಕಾಂತ ಚಿಮ್ಮಲ, ವೈಷ್ಣವಿ ಗೂಳಿ, ಮೌನೇಶ ಬಡಿಗೇರ, ಮಲ್ಲು ಪೂಜಾರ ಅವರು ಸಂಗೀತ ರಸದೌತಣ ನೀಡಿ ಜನರನ್ನು ರಂಜಿಸಿದರು. ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಟ್ಟ ಕಲಾವಿದರಿಗೆ ಮೈಸೂರು ದಸರಾ ಉತ್ಸವ ಸಮಿತಿಯವರು ಪ್ರಶಸ್ತಿ ನೀಡಿ ಗೌರವಿಸಿದರು.

# ಮಂಗಳಾರತಿ ಪುಸ್ತಕ ಬಿಡುಗಡೆ



ಹುಬ್ಬಳ್ಳಿ, : ನಗರದ ಕ್ಯೂಬಿಕ್ ಹಾಲ್ ನಲ್ಲಿ ಆಯೋಜಿಸಲಾಗಿದ್ದ 2024 ನೇ ಸಾಲಿನ ಮಂಗಳಾರತಿ ಪುಸ್ತಕ ಬಿಡುಗಡೆ ಸಮಾರಂಭ ನಾಗರಾಜ ಪಟ್ಟಣ ಇವರ ನೇತೃತ್ವದಲ್ಲಿ ನಡೆಯಿತು.

ಶ್ರೀಮತಿ ಅಶ್ವಿನಿ ನಾಗರಾಜ ಪಟ್ಟಣ ಇವರಿಂದ ಸುಮಂಗಲಿಯರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಿತು.

ಸಾನಿಧ್ಯ ಜಗದ್ಗುರು ಡಾ. ಗುರುಸಿದ್ಧ ರಾಜ ಯೋಗೇಂದ್ರ ಮಹಾಸ್ವಾಮಿಗಳು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಜಗದೀಶ ಶೆಟ್ಟರ, ಸೆಂಟ್ರಲ್ ಕ್ಷೇತ್ರದ ಶಾಸಕರಾದ ಮಹೇಶ್ ಟೆಂಗಿನಕಾಯಿ, ಮಾಜಿ ಶಾಸಕರಾದ ಅಶೋಕ್ ಕಾಟವೇ, ಶ್ರೀಮತಿ ಶಾರದಾಬಾಯಿ ರಾ ಹಬೀಬ, ಎಸ್ ಎಸ್ ಕೆ ಬ್ಯಾಂಕ್ ಚೇರ್ಮನರಾದ ವಿಠ್ಠಲ ಲದವಾ, ಸುಭಾಸಸಿಂಗ ಜಮಾದಾರ ಹುಡಾ ಮಾಜಿ ಅಧ್ಯಕ್ಷರಾದ ನಾಗೇಶ್ ಕಲ್ಬುರ್ಗಿ, ಎನ್ ಆರ್ ಹಬೀಬ, ನೀಲಕಂಠಸಾ ಜಡಿ, ಯುವ ಧುರೀಣರಾದ ವೆಂಕಟೇಶ ಕಾಟವೇ, ಪಿ. ಆರ್. ಹಬೀಬ, ಮಹಾನಗರ ಪಾಲಿಕೆ ಸದಸ್ಯರಾದ ಶ್ರೀಮತಿ ಪ್ರೀತಿ ವಿನಾಯಕ ಲದವಾ, ಪ್ರಕಾಶ ಬುರಬುರೆ, ವಿನಾಯಕ ಲದವಾ, ವೆಂಕಟೇಶ ಹಬೀಬ, ಸುನೀಲ ಜಿತೂರಿ, ಸರಳಾ ಭಾಂಡಗೆ, ರತ್ನಮಾಲಾ ಬದ್ದಿ, ಸರಸ್ವತಿ ವಿನಾಯಕ ಧೂಂಗಡಿ, ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಅಂಗನವಾಡಿ ಕಾರ್ಯಕರ್ತೆ & ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಜಿಲ್ಲೆಯ ಇಂಡಿ, ಚಡಚಣ, ಸಿಂದಗಿ, ವಿಜಯಪುರ(ಗ್ರಾ), ವಿಜಯಪುರ(ನ), ಬಸವನ ಬಾಗೇವಾಡಿ ಹಾಗೂ ಮುದ್ದೇಬಿಹಾಳ ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿನ ವಿವಿಧ ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ, ಪುರಸಭೆ, ನಗರಸಭೆ ವ್ಯಾಪ್ತಿಯಲ್ಲಿನ ಖಾಲಿ ಇರುವ ಅಂಗನವಾಡಿ ಕಾಯಕರ್ತೆ ಹಾಗೂ ಸಹಾಯಕಿಯರ ಗೌರವಧನ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಖಾಲಿಯಿರುವ 313 ಅಂಗನವಾಡಿ ಕಾರ್ಯಕರ್ತೆ ಹಾಗೂ 857 ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು 09–11–2024 ಕೊನೆಯ ದಿನವಾಗಿದ್ದು, ಅಂಗನವಾಡಿ ಕಾರ್ಯಕತೆಯರ ಹುದ್ದೆಗೆ ಕನಿಷ್ಠ ಪಿಯುಸಿ ಹಾಗೂ ಸಹಾಯಕಿಯರ ಹುದ್ದೆಗೆ ಕನಿಷ್ಠ ಎಸ್‌ಎಸ್‌ಎಲ್‌ಸಿ ವಿದ್ಯಾರ್ಹತೆಯನ್ನು ಹೊಂದಿರಬೇಕು. ಅರ್ಜಿಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವೆಬ್‌ಸೈಟ್ https://karnemakaone.kar.nic.in/abcd/ ಮೂಲಕ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಶಿಶು ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇ–ರಿಯ ಪ್ರಕಟಣೆ ತಿಳಿಸಿದೆ.

# ಅ.11 ರಂದು ನವರಾತ್ರಿ ಉತ್ಸವ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ಪಟ್ಟಣದ ಶಿವಾಜಿ ಗಲ್ಲಿಯಲ್ಲಿರುವ ಅಂಬಾಭವಾನಿ ದೇವಸ್ಥಾನದಲ್ಲಿ ಅ.11 ರಂದು ಸಂಜೆ 6 ಗಂಟೆಗೆ ನವರಾತ್ರಿ ಉತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಸಾನಿಧ್ಯವನ್ನು ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ವಹಿಸವರು. ಅಧ್ಯಕ್ಷತೆಯನ್ನು ಸಚಿವ ಶಿವಾನಂದ ಪಾಟೀಲ ವಹಿಸುವರು. ಮುಖ್ಯ ಅತಿಥಿಗಳಾಗಿ ಅಂಬಾಭವಾನಿ ದೇವಸ್ಥಾನದ ಅಧ್ಯಕ್ಷ ಯಮನೂರಿ ಬಿದರಕುಂದಿ, ಅತಿಥಿಗಳಾಗಿ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಐ.ಸಿ.ಪಟ್ಟಣಶೆಟ್ಟಿ, ಕೆಕೆ–ಎಂಪಿ ಅಧ್ಯಕ್ಷ ಬಸವರಾಜ ಬಿಜಾಪುರ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಸುರೇಶ ಹಾರಿವಾಳ, ಪಿಕೆಪಿಎಸ್ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ, ಪುರಸಭೆ ಸದಸ್ಯರಾದ ರವಿ ಪಟ್ಟಣಶೆಟ್ಟಿ, ಅಶೋಕ ಗುಳೇದ, ರಾಷ್ಟ್ರೀಯ ಬಸವ ಸೈನ್ಯ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ, ಗಣ್ಯ ವ್ಯಾಪಾರಸ್ಥ ಶಿವಪುತ್ರ ಕೆಂಭಾವಿ, ಯುವ ಮುಖಂಡರಾದ ಬಸವರಾಜ ಕೋಟಿ, ಸಂಗಮೇಶ ಓಲೇಕಾರ, ರವಿ ಚಿಕ್ಕೊಂಡ, ಸುರೇಶ ಪಡಶೆಟ್ಟಿ, ಮುದಕಣ್ಣ ಗೊಳಸಂಗಿ ಆಗಮಿಸುವರು ಎಂದು ಅಂಬಾಭವಾನಿ ದೇವಸ್ಥಾನದ ನವರಾತ್ರಿ ಉತ್ಸವ ಸಮಿತಿಯ ಪ್ರಕಟಣೆ ತಿಳಿಸಿದೆ.

# ವಿದ್ಯುನ್ಮಾನ ಮಾದರಿಯ ಥೀಮ್‌ಪಾರ್ಕ



ಚನ್ನಮ್ಮನ ಕಿತ್ತೂರು,: ಕಿತ್ತೂರು ಕೋಟೆ ಪ್ರವಾಸಿ ತಾಣವಾಗಿಸುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ರೂಪಿಸಲಾಗಿದೆ. ರೂ.30 ಕೋಟಿ ಅನುದಾನದಡಿಯಲ್ಲಿ ಹೊಸ ತಂತ್ರಜ್ಞಾನ ಬಳಕೆಯ ಮೂಲಕ ವಿದ್ಯುನ್ಮಾನ ಮಾದರಿಯ ಉದ್ಯಾನವನ(ಥೀಮ್‌ಪಾರ್ಕ) ನಿರ್ಮಾಣ ಮಾಡಲಾಗುವುದೆಂದು ಕಂದಾಯ ಇಲಾಖೆ ಸಚಿವ ಕೃಷ್ಣಭೈರೇಗೌಡ ಹೇಳಿದರು.

ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಹಾಗೂ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರ ಇವರ ಸಂಯುಕ್ತ ಆಶ್ರಯದಲ್ಲಿ ಕೋಟೆ ಆವರಣದಲ್ಲಿ ನಡೆದ ಚನ್ನಮ್ಮನ ಕೋಟೆ ಅರಮನೆ ಸಂರಕ್ಷಣಾ ಕಾಮಗಾರಿ, ಭೂಮಿ ಪೂಜೆ ಹಾಗೂ ಶಂಕುಸ್ಥಾಪನೆ ಸಮಾರಂಭದಲ್ಲಿ ಮಾತನಾಡಿ ಕೋಟೆ ಮುಂಭಾಗದ ಮಹಾದ್ವಾರ, ಗೋಡೆ ಸೇರಿದಂತೆ ವಿವಿಧ ಅವಶೇಷಗಳನ್ನು ರಕ್ಷಿಸಲು 12.11ಕೋಟಿಹಾಗೂ ಇನ್ನಿತರಕಾಮಗಾರಿಗಳಿಗೆ 2.4 ಕೋಟಿ ಅನುದಾನ ಬಳಕೆಯಾಗಲಿದೆ ಎಂದರು.

ಶಾಸಕ ಬಾಬಾಸಾಹೇಬ ಪಾಟೀಲ ಅವರು ಕ್ಷೇತ್ರದ ಹಾಗೂ ಕೋಟೆ ಅಭಿವೃದ್ಧಿಗಾಗಿ ವಿಶೇಷ ಆಸಕ್ತಿವಹಿಸಿ ಮುಖ್ಯಮಂತ್ರಿ ಹಾಗೂ ನಮ್ಮ ಮೇಲೆ ಒತ್ತಡ ಹೇರಿ ಹೆಚ್ಚಿನ ಅನುದಾನ ಪಡೆದುಕೊಳ್ಳುವಲ್ಲಿ ಯಶಸ್ಸು ಕಂಡಿದ್ದಾರೆ. ಅದ್ದೂರಿಯಿಂದ ಉತ್ಸವ ಆಚರಿಸಲಾಗುವುದುದೆಂದು ತಿಳಿಸಿದರು.

ಕೋಟೆ ಕೆಲಭಾಗ ಶಿಥಿಲಗೊಂಡಿದ್ದು ದುರಸ್ತಿ ಅಗತ್ಯವಿದೆ. ಕುಸಿದ ಗೋಡೆಯನ್ನು ನವೀಕರಿಸಿ ಅವಶೇಷಗಳ ರಕ್ಷಣೆಯ ಮೂಲಕ ಇತಿಹಾಸ ಉಳಿಸುವ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಪುರಾತತ್ವ ಇಲಾಖೆ ಸಂಯೋಗದೊಂದಿಗೆ ಕೋಟೆ ದುರಸ್ತಿಗೆ ಟೆಂಡರ್ ಕರೆಯಲಾಗಿದ್ದು ಮೂಲ ಪದ್ಧತಿ ಅನುಸರಿಸಿ ದುರಸ್ತಿ ಪಡಿಸಲಾಗುವುದು ಎಂದು ಸಚಿವರು ಮಾಹಿತಿ ನೀಡಿದರು.

ಈಗಾಗಲೇ ಸರಕಾರ ಹಲವಾರು ಬಾರಿ ಯೋಚಿಸಿದೆ. ಅರಮನೆಯ ಮೂಲ ವಿನ್ಯಾಸದ ಮಾಹಿತಿ ಕೊರತೆ ಇದ್ದ ಕಾರಣ ಮರು ನಿರ್ಮಾಣ ವಿಳಂಬವಾಗಿದ್ದು ಸದ್ಯಕ್ಕೆ ಅವಶೇಷಗಳ ರಕ್ಷಣೆಗೆ ತ್ವರಿತವಾಗಿ ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಉದ್ಯಾನವನ ಅಭಿವೃದ್ದಿಯೊಂದಿಗೆ ಕೋಟೆ ಸ್ವಚ್ಛತೆಪಡಿಸಲಾಗುವುದು. 3 ಕೋಟಿ ವೆಚ್ಚದಲ್ಲಿ ರಾಣಿಚನ್ನಮ್ಮ ಸ್ಮಾರಕಭವನ ನಿರ್ಮಾಣ ಹಂತದಲ್ಲಿ ಒಟ್ಟು 18 ಕೋಟಿ ರೂ. ಅನುದಾನದಡಿಯಲ್ಲಿ ಹಲವಾರು ಕಾಮಗಾರಿಗಳು ಪ್ರಗತಿಯಲ್ಲಿವೆ.

ಉತ್ತರ ಕರ್ನಾಟಕದಲ್ಲಿ ಕಿತ್ತೂರು ಭಾಗವನ್ನು ದೊಡ್ಡ ಪ್ರವಾಸಿ ತಾಣವಾಗಿಸಲು ಅನೇಕ ಯೋಜನೆಗಳನ್ನು ರೂಪಿಸಲಾಗಿದೆ. 30 ಕೋಟಿ ಅನುದಾನ ಅಡಿಯಲ್ಲಿ ಚನ್ನಮ್ಮನ ಇತಿಹಾಸ ಕುರಿತು ಇಂದಿನ ಯುವಪಿಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಸದ್ಯದಲ್ಲಿ ಟೆಂಡರ್ ಕರೆಯಲಾಗಿದೆ. ಇತಿಹಾಸ ಅರಿಯದೇ ಭವಿಷ್ಯದಲ್ಲಿ ಅಭಿವೃದ್ಧಿ ಸಾಧ್ಯವಿಲ್ಲ ಹೇಳಿದರು.

ಅಧ್ಯಕ್ಷತೆವಹಿಸಿ ಶಾಸಕ ಬಾಬಾಸಾಹೇಬ ಪಾಟೀಲ ಮಾತನಾಡಿ ಮುಖ್ಯಮಂತ್ರಿಯವರು ಈ ಭಾಗದ ಅಭಿವೃದ್ಧಿಗೋಸ್ಕರ ಸಾಕಷ್ಟು ಹಣ ಬಿಡುಗಡೆಗೊಳಿಸಿದ್ದು ಅವರಿಗೆ ಈ ಭಾಗದ ಜನತೆಯ ಪರವಾಗಿ ಅಭಿನಂದನೆ ತಿಳಿಸಿದರು. ಈಗಾಗಲೇ ಹಲವಾರು ಯೋಜನೆಗಳನ್ನು ರೂಪಿಸಿ ಮಾದರಿ ಉದ್ಯಾನವನ ನಿರ್ಮಾಣ ಮಾಡಲಾಗುವುದು. ಕಿತ್ತೂರಿನ ಅವಶೇಷಗಳನ್ನು ರಕ್ಷಿಸಿ ಇದರ ಇತಿಹಾಸ ಯುವಪಿಳಿಗೆಗೆ ಪರಿಚಯಿಸಲಾಗುವುದು ಮುಂದಿನ ದಿನಗಳಲ್ಲಿ ಪ್ರಾಧಿಕಾರದಿಂದ ಹೆಚ್ಚಿನ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದೆಂದರು.

ಈ ವೇಳೆ ಮಡಿವಾಳ ರಾಜಯೋಗೀಂದ್ರ ಸ್ವಾಮಿಜೀ ಸಂಸ್ಥಾನ ಕಲ್ಮಠ ಕಿತ್ತೂರು, ನಿಚ್ಚಣಕಿಯ ಮಡಿವಾಳೇಶ್ವರ ಮಠ ಪಂಚಾಕ್ಷರಿ ಸ್ವಾಮಿಜೀ, ಜಿಲ್ಲಾಧಿಕಾರಿ ಮೊಹಮ್ಮದ ರೋಶನ್, ಜಿಲ್ಲಾ ಪೋಲಿಸ್ ವರಿಷ್ಠ ಡಾ. ಭೀಮಾಶಂಕರ ಗುಳೇದ, ಪ್ರಾಧಿಕಾರ ಆಯುಕ್ತೆ ಉಪವಿಭಾಗಾಧಿಕಾರಿ ಪ್ರಭಾವತಿ ಫಕ್ಕೀರಪುರ, ತಹಶೀಲ್ದಾರ ರವೀಂದ್ರ ಹಾದಿಮನಿ, ತಾಪಂ ಇಓ ಕಿರಣ ಘೋರ್ಪಡೆ, ಬಿಇಓ ಚನ್ನಬಸಪ್ಪ ತುಬಾಕಿ, ಪಿಡಬ್ಲೂಡಿ ಎಇಇ ಸಂಜೀವ ಮಿರಜಕರ, ಕ್ಯೂರೇಟರ್ ರಾಘವೇಂದ್ರ, ರೋಹಿಣಿ ಪಾಟೀಲ, ನಾನಾಸಾಬ ಪಾಟೀಲ, ಅಶಪಾಕ ಹವಾಲ್ದಾರ, ಸುನೀಲ್ ಘೀವಾರಿ ಕೃಷ್ಣಾ ಬಾಳೇಕುಂದ್ರಗಿ, ಮುದಕಪ್ಪ ಮರಡಿ, ಅನಿಲ್ ಎಮ್ಮಿ, ಸಿ.ಬಿ. ಪಾಟೀಲ, ಸಾಗರ ದೇಸಾಯಿ, ಚನ್ನಗೌಡ ಪಾಟೀಲ, ತಹಶೀಲ್ದಾರ ಕಚೇರಿ ಸಿಬ್ಬಂದಿ, ಸೇರಿದಂತೆ ರಾಣಿ ಚನ್ನಮ್ಮ ಅಭಿಮಾನಿ ಬಳಗ, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೋಂಡಿದ್ದರು. ಶಿಕ್ಷಕ ವಿವೇಕ ಕುರಗುಂದ ನಿರೂಪಿಸಿದರು.

# ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮದಿಂದ ಕಾಯಕ ಸ್ಪೂರ್ತಿ(ಮಹಿಳೆಯರಿಗೆ) ಯೋಜನೆ, ಪಾದುಕೆ ಕುಟೀರ ಯೋಜನೆ, ಮಾರುಕಟ್ಟೆ ಸಹಾಯ ಯೋಜನೆ, ಚರ್ಮಕಾರರ ಕಿರು ಆರ್ಥಿಕ ನೇರ ಸಾಲ ಯೋಜನೆ, ನೇರ/ಸಂಚಾರಿ ಮಾರಾಟ ಯೋಜನೆ ಸೌಲಭ್ಯಗಳನ್ನು ಪಡೆಯಲು ಆನ್‌ಲೈನ್ ಅರ್ಜಿ ಅಹ್ವಾನಿಸಲಾಗಿದೆ.

ಸೇವಾ ಸಿಂಧೂ, ಗ್ರಾಮ ಒನ್, ಕರ್ನಾಟಕ ಒನ್ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು 30–10–2024 ಕೊನೆಯ ದಿನವಾಗಿದ್ದು, ಅರ್ಜಿ ಸಲ್ಲಿಸಿದವರು ಆನ್‌ಲೈನ್ ಅರ್ಜಿಯ ರಶೀದಿಯೊಂದಿಗೆ ಸೂಕ್ತ ದಾಖಲಾತಿಗಳನ್ನು ಲಿಡ್ಕರ್ ಕಚೇರಿಗೆ ಸಲ್ಲಿಸಬಹುದು ಎಂದು ವಿಜಯಪುರದ ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮಮದ ಜಿಲ್ಲಾ ಸಂಯೋಜಕರ ಪ್ರಕಟಣೆ ತಿಳಿಸಿದೆ.

# ರೋಗಿಗಳ ಆರೈಕೆದಾರರಿಂದ ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2024–25ನೇ ಸಾಲಿನ ಸೆರಬಲ್ ಪಾಲ್ಸಿ, ಮಸ್ಕ್ಯುಲರ್, ಡಿಸ್ಟ್ರೋಫಿ, ಪಾರ್ಕಿನ್ಸನ್ಸ್ ಮತ್ತು ಮಲ್ಟಿಪಲ್ ಸ್ಕ್ಲೆರೊಸಿಸ್ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಮಾಹೆಯಾನ ರೂ.1,000 ಪ್ರೋತ್ಸಾಹಧನವನ್ನು ನೀಡುವ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ.

30–10–2024 ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕವಾಗಿದೆ. ಈಗಾಗಲೇ ಅರ್ಜಿ ಸಲ್ಲಿಸಿದವರನ್ನು ಹೊರತುಪಡಿಸಿ ಉಳಿದ ಮೇಲಿನ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ತಾಲೂಕಾ ಪಂಚಾಯತ ಕಾರ್ಯಾಲಯಗಳಲ್ಲಿ ಕಾರ್ಯಾನಿರ್ವಹಿಸುತ್ತಿರುವ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ರವಿ ರಾಠೋಡ (ವಿಜಯಪುರ–9003555337), ಪರಶುರಾಮ ಬೋಸಲೆ (ಇಂಡಿ–9972441464), ಮುತ್ತುರಾಜ ಸಾತಿಹಾಳ (ಸಿಂದಗಿ–9980019635), ಎಸ್. ಡಿ ಬಿರಾದಾರ (ಬಸವನ ಬಾಗೇವಾಡಿ–8722135660) ಹಾಗೂ ಎಸ್. ಕೆ. ಘಾಟಿ (ಮುದ್ದೇಬಿಹಾಳ–9740682979) ಹಾಗೂ ಕಚೇರಿ ದೂರವಾಣಿ ಸಂಖ್ಯೆ08352–796060 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗ–ರಿಕರ ಸಬಲೀಕರಣಾಧಿಕಾ–ರಿಗಳಾದ ಶ್ರೀಮತಿ ಸವಿತಾ ಕಾಳೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುನವಳ್ಳಿ: ನಾಡಹಬ್ಬ ಉತ್ಸವದ ಉದ್ಘಾಟನೆ



ಮುನವಳ್ಳಿ,: ಪಟ್ಟಣದ ಶ್ರೀ ಪಂಚಲಿಂಗೇಶ್ವರ ಸಭಾ ಭವನದಲ್ಲಿ ನಾಡಹಬ್ಬ ಉತ್ಸವದ ಮಹಿಳಾಗೋಷ್ಠಿ ಕಾರ್ಯಕ್ರಮ ಜರುಗಿತು.

ಸಾನ್ನಿಧ್ಯ ವಹಿಸಿದ ನಿತ್ಯಾನಂದ ಸತ್ಸಂಗ ಆಶ್ರಮದ ಮುಕ್ತಾನಂದ ಶ್ರೀಗಳು ಮಾತನಾಡಿ ನಮ್ಮ ದೇಶದ ಸಂಸ್ಕೃತಿ ಸಂಪ್ರದಾಯ ಬೇರೆ ದೇಶಗಳಿಗೂ ಆದರ್ಶಪ್ರಾಯ ಪಾಶ್ಚಿಮಾತ್ಯ ಸಂಸ್ಕೃತಿ ಅನುಕರಣೆ ಬೇಡ ಹಾಗೂ ಪ್ರತಿಯೊಂದು ಹಬ್ಬವು ವಿಭಿನ್ನವಾಗಿ ಸಂಭ್ರಮದಿಂದ ಆಚರಿಸುವಲ್ಲಿ ನಮ್ಮದೇಶ ಮುಂದಿದೆ ನಮ್ಮ ಹಬ್ಬಗಳನ್ನು ಬೇರೆ ದೇಶಗಳಲ್ಲಿ ಆಚರಿಸುತ್ತಿರುವರು ಇದರಿಂದ ನಮ್ಮ ಪರಂಪರೆಗೆಳೆಲ್ಲ ಬೇರೆ ದೇಶಗಳು ಸ್ವಾಗತಿಸುವಲ್ಲಿ ಮುಂದಿದೆ ಎಂದರು.

ಬಿ.ಜೆ.ಪಿ ಮುಖಂಡ ವಿರೂಪಾಕ್ಷ ಮಾಮನಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಈಗಿನ ಯುಗದಲ್ಲಿ ನಾಡು ನುಡಿ ಪರಂಪರೆ ಉಳಿಸುವ ಸಂದೇಶಗಳು ಜನತೆಗೆ ತಲುಪಿ ಸಮಾಜ ಉನ್ನತಿಯತ್ತ ಸಾಗಬೇಕಿದೆ. ಯುವಜನರು ನಮ್ಮ ನಾಡಿನ ಸಂಸ್ಕೃತಿ, ಧರ್ಮ, ಪರಂಪರೆ ಉಳಿಸಿ ಬೆಳೆಸಬೇಕು ಬಾಡಹಬ್ಬಗಳಲ್ಲಿ ಗ್ರಾಮೀಣ ಆಟ ಓಟ ನಾಟಕಗಳು ಮುಂದುವರೆಯಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಜ್ಯೋತಿ ಯಲಬುರ್ಗಿ ಮಾತನಾಡಿ ಮಹಿಳೆಯರು ಆಧುನಿಕತೆ ಭರಾಟೆಯಲ್ಲಿ ನಮ್ಮ ಸಂಸ್ಕೃತಿ ಮರೆಯಬಾರದು ನಮ್ಮ ಮಕ್ಕಳಿಗೆ ಇಂದಿನ ದಿನಗಳನ್ನು ನೆನಪಿಸಿಕೊಟ್ಟು ಕಾರ್ಯರೂಪದಲ್ಲಿ ತರುವಂತಾಗಬೇಕು ಎಂದರು. ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಪಂಚನಗೌಡ ದ್ಯಾಮನಗೌಡ್ರ ಮಾತನಾಡಿದರು.

ಶಾರದಾ ಹಾಗೂ ಬನಶಂಕರಿ ಮಹಿಳಾ ಮಂಡಳದಿಂದ ಭಜನಾ ಶಾಲಾ ಮಕ್ಕಳಿಂದ ವೇಷಭೂಷಣ ಹಾಗೂ ಧಾರವಾಡ ರಂಗ ಸಾಮ್ರಾಟ ಅಭಿನಯ ಶಾಲೆ ತಂಡದಿಂದ ವಚನ ನೃತ್ಯ ಜರುಗಿತು. ನಿಂಗನಗೌಡ ಮಲಗೌಡ್ರ, ಶ್ರೀಕಾಂತ ಮಿರಜಕರ, ಸುರೇಶ ಜಾವೂರ, ಬಿ.ಬಿ.ನಾವಲಗಟ್ಟಿ, ಗುರುಶಾಂತ ಚಂದರಗಿ, ಬಾಪುಗೌಡ ಪಾಟೀಲ, ಶ್ರೀಶೈಲ ಹಂಜಿ, ಕೇಶವ ಭಂಡಾರಿ, ಎ.ಪಿ.ಲಂಬೂನವರ, ಸುಮಾ ಯಲಿಗಾರ, ದ್ರಾಕ್ಷಾಯಿಣಿ ಗೋಪಶೆಟ್ಟಿ, ಸವಿತಾ ಹಂಜಿ, ಕಾಶವ್ವ ಹಿರೇಮೆತ್ರಿ, ಗೌರಿ ಜಾವೂರ, ಅನಿತಾ ಯಲಿಗಾರ, ರವಿ ದ್ಯಾಮನಗೌಡರ, ಗುರು ಬೆಳವಲಗಿಡದ, ಇತರರು ಉಪಸ್ಥಿತರಿದ್ದರು.

## ಡಾ. ಅಜಯಸಿಂಗ್ ಬಳಿಗೆ ಹೋರಾಟ ಸಮಿತಿ ನಿಯೋಗ: ಕಲ್ಯಾಣದ ಪ್ರಗತಿ ಕುರಿತು ಚರ್ಚೆ



ಕಲಬುರಗಿ: ಕಲ್ಯಾಣ ಕರ್ನಾಟಕ ಪ್ರದೇಶದ ರಚನಾತ್ಮಕ ಕಾಲಮಿತಿಯ ಅಭಿವೃದ್ಧಿಯ ವಿಷಯಗಳಿಗೆ ಸಂಬಂಧಿಸಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರೊಂದಿಗೆ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ನೇತೃತ್ವದಲ್ಲಿ ಸಮಿತಿಯ ಗೌರವಾಧ್ಯಕ್ಷ ಬಸವರಾಜ್ ದೇಶಮುಖ್ ಮತ್ತು ಸಂಸ್ಥಾಪಕ ಅಧ್ಯಕ್ಷ ಲಕ್ಷ್ಮಣ್ ದಸ್ತಿಯವರ ಮುಖಂಡತ್ವದಲ್ಲಿ ಕಲ್ಯಾಣದ ಪರಿಣಿತ ತಜ್ಞರ, ಚಿಂತಕರ ನಿಯೋಗ ಮಂಡಳಿಯ ಅಧ್ಯಕ್ಷರ ನಿವಾಸದಲ್ಲಿ ಭೇಟಿ ಮಾಡಿ ಕಲ್ಯಾಣ ಕರ್ನಾಟಕ ಪ್ರದೇಶದ ರಚನಾತ್ಮಕ ಪ್ರಗತಿಗೆ ಸಂಬಂಧಿಸಿದ ಮಹತ್ವದ ವಿಷಯಗಳ ಬಗ್ಗೆ ಸಮಾಲೋಚನಾ ಸಭೆ ಮಾಡಿ ವಿವರವಾದ ಪ್ರಸ್ತಾವನೆ ಸಲ್ಲಿಸಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ದೂರ ದೃಷ್ಟಿಕೋನದ ಐದು ಇಲ್ಲವೆ ಹತ್ತು ವರ್ಷಗಳ ವೈಜ್ಞಾನಿಕ ಕ್ರಿಯಾ ಯೋಜನೆ ರೂಪಿಸಿ ಕಾಲಮಿತಿಯಲ್ಲಿ ಪ್ರಾದೇಶಿಕ ಅಸಮತೋಲನೆ ನಿವಾರಣೆಗೆ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲು, ಮಂಡಳಿಯ ಅಡಿ ಮೇಲ್ವಿಚಾರಣಾ ಸಮಿತಿ, ಮೌಲ್ಯ ಮಾಪನ ಸಮಿತಿ, ಜಾಗ್ರತ ದಳ (ವಿಜಿಲೆನ್ಸ್ ಕಮೀಟಿ) ರಚಿಸಲು, ಉಪ ಸಮಿತಿಗಳಿಗೆ ಕಲ್ಯಾಣದ ಎಳು ಜಿಲ್ಲೆಗಳ ಪರಿಣಿತರನ್ನು ಪರಿಗಣಿಸಲು, ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಿದರು.

ಸಮಿತಿಯ ಪ್ರಸ್ತಾವನೆ ಸ್ವೀಕರಿಸಿದ ಡಾ. ಅಜಸಿಂಗ್ ಅವರು ಮಾತನಾಡಿ, ಕಲ್ಯಾಣ ಕರ್ನಾಟಕದ ರಚನಾತ್ಮಕ ಪ್ರಗತಿ ಬಗ್ಗೆ ಮತ್ತು ಕಲ್ಯಾಣದ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ತಾವು ವಿಶೇಷ ಆಸಕ್ತಿ ವಹಿಸಿದ್ದು ಇದಕ್ಕೆ ಸಂಬಂಧಿಸಿದಂತೆ ಸಮಿತಿ ಸಲ್ಲಿಸಿರುವ ಬೇಡಿಕೆಗಳ ಬಗ್ಗೆ ತಾವು ಗಂಭೀರವಾಗಿ ಪರಿಗಣಿಸಿ ಕಾಲಮಿತಿಯಲ್ಲಿ ಈಡೇರಿಸುವ ನಿಟ್ಟಿನಲ್ಲಿ ಸಕಾರಾತ್ಮಕವಾಗಿ ಸ್ಪಂದಿಸುವ ಬಗ್ಗೆ ಬಲವಾದ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪರಿಣಿತ ತಜ್ಞರಾದ ಮತ್ತು ಸಮಿತಿಯ ಮುಖಂಡರಾದ ಪ್ರೊ. ಆರ್.ಕೆ. ಹುಡಗಿ, ಪ್ರೊ ಬಸವರಾಜ್ ಕುಮ್ಮನೂರ್, ಪ್ರೊ. ಬಸವರಾಜ್ ಗುಲಶೆಟ್ಟಿ, ಪ್ರೊ. ಶಂಕ್ರಪ್ಪ ಹತ್ತಿ, ಪ್ರೊ.ಗುರುಬಸಪ್ಪ,ಡಾ. ಗಾಂಧೀಜೀ ಮೊಳಕೇರಿ, ರೌಫ ಖಾದ್ರಿ, ಅಬ್ದುಲ್ ರಹೀಂ , ಎಮ್ ಬಿ ನಿಂಗಪ್ಪ,

ಅಸ್ಲಂ ಚೌಂಗೆ ಮುಂತಾದವರು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೆರವು ಪ್ರೋತ್ಸಾಹದಾಯಕ : ಅಗಸರ

ಕಲಬುರಗಿ: ಶ್ರೀ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಟ್ರಸ್ಟ್ ನೀಡುತ್ತಿರುವ ಪ್ರೋತ್ಸಾಹದಾಯಕ ಶಿಷ್ಯವೇತನದ ನೆರವಿನಿಂದ ವಿದ್ಯಾರ್ಥಿಗಳ ಸಾಧನೆಗೆ ಪ್ರೋತ್ಸಾಹ ಸಿಗುತ್ತಿದೆ. ಕಲಿಕೆಯ ಹಂತದಲ್ಲಿ ಸ್ವಸಾಮರ್ಥ್ಯದೊಂದಿಗೆ ಗುರುಹಿರಿಯರ ಮಾರ್ಗದರ್ಶನ ಪಡೆದರೆ ಉನ್ನತ ಸಾಧನೆಗೆ ಪ್ರೇರಣೆ ಸಿಗಲಿದೆ ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ದಯಾನಂದ ಅಗಸರ ಹೇಳಿದರು.

ಶ್ರೀ. ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಕೋಶ ಇವುಗಳ ಸಂಯುಕ್ತಾಶ್ರಯದಲ್ಲಿ ಡಾ. ವೀರೇಂದ್ರ ಹೆಗ್ಗಡೆ ಹಾಗೂ ಮಾತೃಶ್ರೀ ಡಾ. ಹೇಮಾವತಿ ವಿ. ಹೆಗ್ಗಡ್ಗೆಯವರ ಶುಭಾಶೀರ್ವಾದದೊಂದಿಗೆ ಸುಜ್ಞಾನ ನಿಧಿ ಶಿಷ್ಯ ವೇತನ ಮಂಜೂರಾತಿ ಪತ್ರ ವಿತರಣೆ ಹಾಗೂ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಶ್ರೀ. ಕ್ಷೇತ್ರ ಧರ್ಮಸ್ಥಳ ಸಂಸ್ಥೆ ಟ್ರಸ್ಟ್ ರಾಜ್ಯದ ವಿದ್ಯಾರ್ಥಿ ಸಮುದಾಯದ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿದೆ. ವಿವಿಧ ಯೋಜನೆಗಳ ಮೂಲಕ ಮಾನವ ಕಲ್ಯಾಣ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡುತ್ತಿರುವುದರಿಂದ ವಿದ್ಯಾರ್ಥಿಗಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗುತ್ತಿದೆ ಎಂದರು.

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ ಸುಜ್ಞಾನ ನಿಧಿ ಶಿಷ್ಯ ವೇತನ ಮಂಜೂರಾತಿ ಪತ್ರ ವಿತರಿಸಿ ಮಾತನಾಡಿ ವಿದ್ಯಾರ್ಥಿಗಳು ಪದವಿ ಹಂತದಲ್ಲಿ ಉತ್ತಮ ಗುರಿಯ ಕನಸು ಕಾಣಬೇಕು. ವ್ಯವಸ್ಥಿತ ಸಿದ್ಧತೆ ಮತ್ತು ನಿರಂತರ ಪರಿಶ್ರಮಪಟ್ಟರೆ ಗುರಿ ಸಾಧನೆ ಸಾಧ್ಯವಿದೆ. ಪೋಷಕರು ಮಕ್ಕಳ ಭವಿಷ್ಯ ರೂಪಿಸಿಲು ಸಮಯ ಮತ್ತು ಶಿಕ್ಷಣಕ್ಕೆ ಒತ್ತು ನೀಡಬೇಕು. ಉತ್ತಮ ಸ್ನೇಹಿತರ ಒಡನಾಟ ಬೆಳೆಸಿಕೊಂಡು ಉತ್ತಮ ಜೀವನಶೈಲಿ ರೂಢಿಸಿಕೊಳ್ಳಲು ಪ್ರಯತ್ನಿಸಿ ಎಂದು ಸಲಹೆ ನೀಡಿದರು.

ಶ್ರೀ. ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಪ್ರಾದೇಶಿಕ ನಿರ್ದೇಶಕ ಆನಂದ ಸುವರ್ಣ ಮಾತನಾಡಿ ಶ್ರೀ. ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ವಿವಿಧ ವೃತ್ತಿಪರ ಕೋರ್ಸುಗಳನ್ನು ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಶಿಷ್ಯವೇತನ ನೆರವು ಬಹಳ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಹಯಾಕವಾಗಿದೆ. ಮಕ್ಕಳಿಗೆ ಶಿಕ್ಷಣ ಕಲಿಸುವ ಮೂಲಕ ಪಾಲಕರು ಮತ್ತು ಶಿಕ್ಷಕರ ಪ್ರೋತ್ಸಾಹ ಮುಖ್ಯವಾಗಿದೆ. ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಮತ್ತು ಸಂಸ್ಕೃತಿ ಕಲಿಸಿ ಪೋಷಿಸುವ ಜವಾಬ್ದಾರಿಯನ್ನು ಪೋಷಕರು ಬೆಳೆಸಬೇಕು. ಶ್ರೀ. ಕ್ಷೇತ್ರ ಧರ್ಮಸ್ಥಳ ಸಂಸ್ಥೆ ಮಾನವ ಕಲ್ಯಾಣಕ್ಕಾಗಿ ವಾತ್ಸಲ್ಯ, ಕಾರ್ಯಕ್ರಮ, ವಯೋವೃದ್ಧರಿಗೆ ಮಾಸಾಶನ, ಜನಮಂಗಳ, ಕೆರೆಗಳ ಪುನಶ್ಚೇತನ, ಶಿಷ್ಯವೇತನ, ವೃದ್ಧಾಶ್ರಮಗಳಿಗೆ ಆರ್ಥಿಕ ನೆರವು, ಕೆರೆ ನಿರ್ಮಾಣ, ಕುಡಿಯುವ ನೀರಿನ ಘಟಕ ನಿರ್ಮಾಣ ಹೀಗೆ ಹತ್ತಾರು ಕಾರ್ಯಕ್ರಮಗಳನ್ನು ಜನರಿಗೆ ಉಚಿತವಾಗಿ ನೀಡುವ ಮೂಲಕ ಸಮುದಾಯ ಸೇವೆಗೆ ಸಮರ್ಪಿಸಿಕೊಂಡಿದೆ ಎಂದರು




> ಯುವಕರು ಹೆಚ್ಚಾಗಿ ಡ್ರಗ್ಸ್ ವ್ಯಸನಕ್ಕೆ ಬಲಿಯಾಗುತ್ತಿದ್ದಾರೆ. ಪಾಲಕರು ಮತ್ತು ಶಿಕ್ಷಕರು ಹಣ ಗಳಿಕೆಗಿಂತ ಶಿಕ್ಷಣ ಮುಖ್ಯ ಎಂಬುದನ್ನು ಮಕ್ಕಳಿಗೆ ತಿಳಿಸಿಕೊಡಿ. ಸಂಸ್ಕಾರದ ಮನೋಭಾವ ಬೆಳೆಸುವ ಮೂಲಕ ಜ್ಞಾನದಿಂದ ಉನ್ನತ ಸಾಧನೆ ಸಾಧ್ಯ ಎಂಬುದನ್ನು ಮನವರಿಕೆ ಮಾಡಿಕೊಡಿ. ಮನೆಯಲ್ಲಿ ಒಬ್ಬ ವ್ಯಕ್ತಿ ವ್ಯಸನಕ್ಕೆ ಬಲಿಯಾದರೆ, ಇಡೀ ಕುಟುಂಬ ಹಾಳಾಗುತ್ತದೆ. ಮಕ್ಕಳಿಗೆ ಉತ್ತಮ ಜೀವನ ಶೈಲಿ ಜೊತೆಗೆ ಉತ್ತಮ ಸ್ನೇಹಿತರ ಒಡನಾಟವಿದ್ದರೆ ಮಾತ್ರ ನಿಮ್ಮ ಮಕ್ಕಳು ಸುರಕ್ಷಿತರಾಗಿರುತ್ತಾರೆ. ಆಗ ಮಾತ್ರ ನಿಮ್ಮ ಮಕ್ಕಳು ಯಶಸ್ವಿ ಪ್ರಜೆಯಾಗಿ ಬೆಳೆಯುತ್ತಾನೆ.
>
> ■ ಡಾ. ಶರಣಪ್ಪ ಎಸ್.ಡಿ
>
> ಕಲಬುರಗಿ ನಗರ ಪೊಲೀಸ್ ಆಯುಕ್ತ

ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಸಿ. ಎನ್. ಬಾಬಳ ಗಾಂವ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿವಿಧ ವೃತ್ತಿ ಪರ ಕೋರ್ಸುಗಳನ್ನು ಅಧ್ಯಯನ ಮಾಡುತ್ತಿರುವ ಕಲಬುರಗಿ ಜಿಲ್ಲೆಯ 280 ವಿದ್ಯಾರ್ಥಿಗಳು ಸುಜ್ಞಾನ ನಿಧಿ ಶಿಷ್ಯವೇತನಕ್ಕೆ ಆಯ್ಕೆಯಾಗಿದ್ದಾರೆ. ಸಾಂಕೇತಿಕವಾಗಿ ಸಮಾರಂಭದಲ್ಲಿ ಸಂಚಿನ್, ದೀಕ್ಷಾ, ಶಿವಕುಮಾರ್ ಆರ್, ಸಂಧ್ಯಾ, ಶಿಲ್ಪ ಮತ್ತು ಅಭಿಷೇಕ್ ಅವರಿಗೆ ಶಿಷ್ಯವೇತನ ಮಂಜೂರಾತಿ ಪತ್ರವನ್ನು ಗಣ್ಯರು ವಿತರಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಧರ್ಮಸ್ಥಳ ಟ್ರಸ್ಟಿನ ಸಮುದಾಯ ಅಭಿವೃದ್ಧಿ ವಿಭಾಗದ ಪ್ರಾದೇಶಿಕ ನಿರ್ದೇಶಕ ಜಯಂತ ಪೂಜಾರಿ, ನ್ಯಾಯವಾದಿ ವೈಜಾನಾಥ ಜಳಕಿ, ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಅನೀಲ ಕುಮಾರ ಡಂಗೆ, ಶ್ರೀಮತಿ ಮಾಲತಿ ರೇಶ್ಮಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಶ್ರೀ. ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಪ್ರಾದೇಶಿಕ ವಲಯದ ಪದಾಧಿಕಾರಿಗಳು, ಶಿಷ್ಯವೇತನ ಆಯ್ಕೆಯಾದ ವಿದ್ಯಾರ್ಥಿಗಳು, ಪಾಲಕರು ಮತ್ತು ಪೋಷಕರು, ಗುಲಬರ್ಗಾ ವಿಶ್ವವಿದ್ಯಾಲಯದ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಜಯಂತ ಪೂಜಾರಿ ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗಣಪತಿ ಮಾಳಂಜಿ ಅತಿಥಿ ಪರಿಚಯಿಸಿದರು. ಸಂಗೀತ ವಿಭಾಗದ ಅತಿಥಿ ಅಧ್ಯಾಪಕಿ ಡಾ. ಜಯ ದಾನಮ್ಮ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಯೋಜನಾಧಿಕಾರಿ ಕಲ್ಲನಗೌಡ ವಂದಿಸಿದರು. ವೀರೇಶ್ ಮತ್ತು ಮಮತಾ ಕಾರ್ಯಕ್ರಮ ನಿರ್ವಹಿಸಿದರು.



## ಸರಣಿ ಅಪಘಾತ: ಹಲವರಿಗೆ ಗಾಯ



ಕಲಬುರಗಿ,: ನಗರದ ಶಹಾಬಾದ ರಿಂಗ್ ರಸ್ತೆಯಲ್ಲಿಂದು ಬೆಳಿಗ್ಗೆ 9 ಗಂಟೆ ಸುಮಾರಿಗೆ ಸರಣಿ ಅಪಘಾತ ನಡೆದಿದ್ದು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಸೇರಿ ಹಲವಾರು ಜನರು ಗಾಯಗೊಂಡಿದ್ದಾರೆ.

ಖಾಸಗಿ ಶಾಲಾ ಬಸ್ ಚಾಲಕನ ನಿಯಂತ್ರಣ ತಪ್ಪಿ ಎರಡು ಕಾರು, ಎರಡು ಆಟೋ ಮತ್ತು ಒಂದು ಬೈಗೆ ಡಿಕ್ಕಿ ಹೊಡೆದಿದ್ದು, ಬಸ್ಸಿನಲ್ಲಿದ್ದ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಕಾರು, ಆಟೋ ಮತ್ತು ಬೈನಲ್ಲಿದ್ದವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಸಂಚಾರಿ ಪೊಲೀಸ್ ಠಾಣೆ-2ರಲ್ಲಿ ಪ್ರಕರಣ ದಾಖಲಾಗಿದೆ.

## ರಾಷ್ಟ್ರದ ಅಭಿವೃದ್ಧಿಗೆ ಅಂಚೆ ಇಲಾಖೆಯ ಕೊಡುಗೆ ಅನನ್ಯ

ಕಲಬುರಗಿ: ಅನೇಕ ವರ್ಷಗಳಿಂದ ಅಂಚೆ ಇಲಾಖೆಯು ಜನತೆಗೆ ಉತ್ತಮವಾದ ಸೇವೆಯನ್ನು ನೀಡುತ್ತಾ ಮೆಚ್ಚುಗೆಗೆ ಪಾತ್ರವಾಗಿದೆ. ಪ್ರಸ್ತುತವಾಗಿ ಅದು ಕೇವಲ ಪತ್ರ ವಿಲೆವಾರಿಗೆ ಮಾತ್ರ ಸೀಮಿತವಾಗದೆ, ಬ್ಯಾಂಕಿಂಗ್ ಸೇವೆ, ಶುಲ್ಕ, ಚಾಲನ್ ಸ್ವೀಕಾರ, ನಿವೃತ್ತಿ ವೇತನ, ಪೋಸ್ಟಲ್ ಸೇವೆಗಳು, ಪಿಂಚಣಿ ಯೋಜನೆ, ಸರ್ಕಾರದ ವಿವಿಧ ಯೋಜನೆಗಳನ್ನು ಜನರಿಗೆ ಮುಟ್ಟಿಸುವ ಸೇವೆ ಮಾಡುತ್ತಿದ್ದು, ತನ್ಮೂಲಕ ರಾಷ್ಟ್ರದ ಅಭಿವೃದ್ಧಿಗೆ ಅಂಚೆ ಇಲಾಖೆಯು ಅನನ್ಯವಾದ ಕೊಡುಗೆಯನ್ನು ನೀಡುತ್ತಿದೆ ಎಂದು ನಿವೃತ್ತ ಪೋಸ್ಟ್ ಮಾಸ್ಟರ್ ರೇವಣಸಿದ್ದಪ್ಪ ಪವಾಡಶೆಟ್ಟಿ ಹೇಳಿದರು.

ನಗರದ ಆಳಂದ ರಸ್ತೆಯ ಖಾದ್ರಿ ಚೌಕನಲ್ಲಿರುವ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಬುಧವಾರ ಏರ್ಪಡಿಸಲಾಗಿದ್ದ 'ವಿಶ್ವ ಅಂಚೆ ದಿನಾಚರಣೆ'ಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಅಂಚೆ ಇಲಾಖೆಯ ಪ್ರಧಾನ ಕಚೇರಿಯ ಪೋಸ್ಟಮಾನ್ ಮಹಾದೇವ ಎಸ್.ಚಿಪ್ಪರಕಟ್ಟಿ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಹಿಂದಿನ ಕಾಲದಲ್ಲಿ ರಸ್ತೆಗಳಿಲ್ಲದ ಸಂದರ್ಭದಲ್ಲಿ ಸಾಕಷ್ಟು ತೊಂದರೆ ಅನುಭವಿಸಿ ಮನೆಗೆ ಪತ್ರಗಳು, ಟೆಲಿಗ್ರಾಮ್, ಮನಿಆರ್ಡರ್ ಮುಟ್ಟಿಸುವ ಕಾರ್ಯಮಾಡಲಾಗಿದೆ. ಪ್ರಸ್ತುತವಾಗಿ ಸೌಲಭ್ಯಗಳು ದೊರೆಯುತ್ತಿವೆ. ಹಿಂದಿನಿಗಿಂತಲೂ ಈಗ ಸರ್ಕಾರದ ವಿವಿಧ ಯೋಜನೆಗಳ ಪ್ರಮಾಣ ಹೆಚ್ಚಾಗಿದ್ದು, ಅವುಗಳನ್ನು ಫಲಾನುಭವಿಗಳಿಗೆ ನೀಡಬೇಕಾಗಿರುವುದರಿಂದ ಕಾರ್ಯ ಹೆಚ್ಚಾಗಿದೆ. ಸರ್ಕಾರದ ಯೋಜನೆಗಳನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡುತ್ತಾ, ಇಲಾಖೆಯ ಯೋಜನೆಗಳು, ಕಾರ್ಯನಿರ್ವಹಣೆ ಬಗ್ಗೆ ಜನಜಾಗೃತಿ ಮೂಡಿಸುವುದು ದಿನಾಚರಣೆಯ ಉದ್ದೇಶವಾಗಿದೆ. ಪವಾಡಶೆಟ್ಟಿ ಅವರು ಒಂದೇ ಸ್ಥಳದಲ್ಲಿ ಯಾವುದೇ ಕಪ್ಪು ಚುಕ್ಕೆಯಿಲ್ಲದೆ ಸುದೀರ್ಘವಾಗಿ ನಾಲ್ಕು ದಶಕಗಳ ಕಾಲ ಸೇವೆ ಮಾಡುವುದು ಗಮನಿಸಿದರೆ, ಅವರಲ್ಲಿರುವ ಸೇವಾ ಮನೋಭಾವನೆ, ಕಾಯಕ ಪ್ರಜ್ಞೆ, ಸಮಾಜಕ್ಕೆ ಹಾಗೂ ನೌಕರ ವರ್ಗಕ್ಕೆ ಮಾದರಿಯಾಗಿದೆ. ಇಂದಿಗೂ ಕೂಡಾ ಆ ಭಾಗದಲ್ಲಿ ಎಲ್ಲಾ ಜನರ ಪ್ರೀತಿಗೆ ಪಾತ್ರರಾಗಿದ್ದಾರೆ. ಇಂತಹ ವ್ಯಕ್ತಿಯನ್ನು ಗುರುತಿಸಿ, ಪ್ರೋತ್ಸಾಹಿಸುವ ಕಾರ್ಯ ಮಾಡುವುದು ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಶಿಕ್ಷಕಿಯರಾದ ಪ್ರಿಯಾಂಕ ಉಜಳಂಬಿ, ನಿಲೋಫರ್ ಶೇಖ್, ಪೂಜಾ ಜಮಾದಾರ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಸೇಡಂ ಸಾಂಸ್ಕೃತಿಕವಾಗಿ ಶ್ರೀಮಂತಿಕೆ ನೆಲ : ಮಂಜುನಾಥ



ಕಲಬುರಗಿ: ಸೇಡಂ ನೆಲ ಎಂಬುದು ಸಾಹಿತ್ಯಿಕ ಮತ್ತು ಸಾಂಸ್ಕೃತಿಕವಾಗಿ ಶ್ರೀಮಂತಿಕೆಯಿಂದ ಕೂಡಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಮಂಜುನಾಥ ಎಸ್.ಜಿ. ಅವರು ಹೇಳಿದರು.

ಸೇಡಂ ಪಟ್ಟಣದ ದೊಡ್ಡ ಅಗಸಿಯ ಬಳಿ ಶಿವಸೇನಾ ದಸರಾ ಉತ್ಸವ ಸಮಿತಿ ವತಿಯಿಂದ ಆಯೋಜಿಸಿದ್ದ 30 ನೇ ವರ್ಷದ ದಸರಾ ಉತ್ಸವ ಹಾಗೂ ಲಕ್ಷ ದೀಪೋತ್ಸವ ನಿಮಿತ್ತ ಮಂಗಳವಾರ ಸಂಜೆ 7.30ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದ ಅವರು, ಕರ್ನಾಟಕ ಆ ಭಾಗದಿಂದ ಬಂದವನಾದ್ದರಿಂದ ಈ ಭಾಗಕ್ಕೆ ಬರುವಾಗ ದೂರದ ಪ್ರದೇಶ ಎಂಬ ಭಾವನೆಯಿತ್ತು. ಆದರೆ ಇಲ್ಲಿ ಬಂದ ಮೇಲೆ ಇಲ್ಲಿನ ಜನರ ಹೃದಯಶ್ರೀಮಂತಿಕೆಗೆ ಮಾರುಹೋದೆ. ಈಗ ನಾಲ್ಕು ವರ್ಷದ ನಂತರ ನಮ್ಮ ಭಾಗಕ್ಕೆ ಹೋಗೋಕೆ ಮನಸಿಲ್ಲ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಜಿಲ್ಲಾಧ್ಯಕ್ಷ ಮಹಿಪಾಲರೆಡ್ಡಿ ಮುನ್ನೂರ್ ಮಾತ ನಾಡಿ, ಶಿವಸೇನಾ ಸಮಿತಿ ವತಿಯಿಂದ ಪ್ರತಿ ವರ್ಷ ಪ್ರತಿಷ್ಠಾಪನೆ ಮಾಡುವ ಜಗದಂಬಾ ಮೂರ್ತಿ ಮತ್ತು ದಸರಾ ಹಬ್ಬದ ವಿಜೃಂಭಣೆಗೆ ಈ ವರ್ಷ 30 ನೇ ವರ್ಷದ ಸಂಭ್ರಮ. ಸಂಘಟನೆಯಲ್ಲಿ ಶಕ್ತಿಯಿದೆ ಎಂಬುದನ್ನು ತೋರಿಸಿಕೊಟ್ಟಿದ್ದು ಶಿವಸೇನಾ ಸಮಿತಿಯವರು ಎಂದು ಹೇಳಿ, ಮಕ್ಕಳಲ್ಲಿ ಆತ್ಮವಿಶ್ವಾಸ ಮೂಡುವಂತಹ ನಿಟ್ಟಿನಲ್ಲಿ ಕಾರ್ಯಕ್ರಮ ಆಯೋಜಿಸಬೇಕು ಎಂದು, ರಸಪ್ರಶ್ನೆ ಕೇಳಿ, ಥಟ್ ಅಂತ ಉತ್ತರ ಹೇಳಿದ ಎಂಟನೇ ತರಗತಿ ಓದುತ್ತಿರುವ ಅನನ್ಯ ಳಿಗೆ ಸತ್ಕರಿಸಿದರು.

ಜೈ ಭಾರತ ಮಾತಾ ಸೇವಾ ಸಮಿತಿ ತಾಲೂಕು ಅಧ್ಯಕ್ಷ ರಾಜಶೇಖರ ರೆಡ್ಡಿ ಹೈಯ್ಯಾಳ, ಪುರಸಭೆಯ ನಾಮನಿರ್ದೇಶಿತ ಮಾಜಿ ಸದಸ್ಯ ರಾಘವೇಂದ್ರ ಮೆಕ್ಯಾನಿಕ್ ಮುಖ್ಯ ಅತಿಥಿಗಳಾಗಿದ್ದರು. ಶಿವಸೇನಾ ದಸರಾ ಉತ್ಸವ ಸಮಿತಿ ಕಾರ್ಯದರ್ಶಿ ರಾಜೇಂದ್ರ ಬಾಗೋಡಿ ಅಧ್ಯಕ್ಷತೆ ವಹಿಸಿದ್ದರು. ಮಾತೃಛಾಯ ಪಿಯು ಕಾಲೇಜಿನ ಉಪನ್ಯಾಸಕ ರಾಜಕುಮಾರ ಚನ್ನೀರ ಕಾರ್ಯಕ್ರಮ ನಿರೂಪಿಸಿದರು. ಪುರಸಭೆ ಸದಸ್ಯರ ಸಂತೋಷ ತಳವಾರ ಸರ್ವರನ್ನೂ ಸ್ವಾಗತಿಸಿದರು. ಲಕ್ಷ್ಮಣ ಭೋವಿ ವಂದಿಸಿದರು. ಶಿವಸೇನಾ ದಸರಾ ಉತ್ಸವ ಸಮಿತಿ ಅಧ್ಯಕ್ಷ ಶಿವಕುಮಾರ ಜೀವಣಗಿ, ಗೌರವಾಧ್ಯಕ್ಷ ಮಲ್ಲಿಕಾರ್ಜುನ ಭೋವಿ, ಅಭಿಷೇಕ ಬಾಗೋಡಿ, ರಾಜು ಎಸ್. ದೀಪಕ ಬಾಗೋಡಿ, ಭೀಮಾಶಂಕರ ಕೊಳ್ಳಿ, ಸಾಬಣ್ಣ ತೊಟ್ನಳ್ಳಿ, ಶಂಕರ ಟಗರೆ, ಜಗನ್ನಾಥ ಟಗರೆ, ಜಗನ್ನಾಥ ಗುಡ್ಡದ ಇತರರಿದ್ದರು.

## ಬಿಜೆಪಿ ಸಂಘಟಿಸಲು ದತ್ತಾತ್ರೇಯ ಪಾಟೀಲ್ ಕರೆ



ಕಲಬುರಗಿ,: ಭಾರತೀಯ ಜನತಾ ಪಾರ್ಟಿಯನ್ನು ಮತ್ತಷ್ಟು ಹೆಚ್ಚು ಪರಿಣಾಮಕಾರಿ ಸಂಘಟಿಸಲು ಬಿಜೆಪಿ ನಾಯಕ, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ್ ಅವರು ಯುವ ಮೋರ್ಚಾ ಪದಾಧಿಕಾರಿಗಳಿಗೆ ಕರೆ ನೀಡಿದರು.

ನಗರದ ತಮ್ಮ ಸ್ವ ಗೃಹದಲ್ಲಿ ನಗರ ಜಿಲ್ಲೆಯ ಯುವ ಮೋರ್ಚಾ ಪದಾಧಿಕಾರಿಗಳಾಗಿ ನೇಮಕಗೊಂಡಿರುವ ಗೋಪಾಲಕೃಷ್ಣ ಕುಲಕರ್ಣಿ (ಕಾರ್ಯದರ್ಶಿ) ಹಾಗೂ ಶಿವಲಿಂಗ ಪಾಟೀಲ್(ಉಪಾಧ್ಯಕ್ಷ) ಅವರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಪಕ್ಷವನ್ನು ಯುವ ಜನತೆಗೆ ತಲುಪಿಸುವಲ್ಲಿ ಯುವ ಮೋರ್ಚಾದ ಪಾತ್ರ ತುಂಬಾ ಮುಖ್ಯವಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ಬಡವರಿಗೆ, ಮಹಿಳೆಯರಿಗೆ, ಎ□□ಸಿ/ಎ□□ಟಿ ಹಾಗೂ ಹಿಂದುಳಿದ ವರ್ಗಗಳಿಗೆ ನೀಡಿರುವ ಜನಪರ ಕಾರ್ಯಕ್ರಮಗಳನ್ನು ಮನೆ ಮನೆಗೆ ತಲುಪಿಸುವ ಮಹತ್ವದ ಜವಾಬ್ದಾರಿ ಪಕ್ಷದ ಎಲ್ಲರ ಮೇಲಿದೆ ಎಂದು ಹೇಳಿದರು.

ಪ್ರಸ್ತುತ ನಡೆಯುತ್ತಿರುವ ಬಿಜೆಪಿ ಸದಸ್ಯತ್ವ ಅಭಿಯಾನವನ್ನು ಎಲ್ಲರೂ ಸೇರಿ ಅತಿ ಹೆಚ್ಚಿನ ಸದಸ್ಯರನ್ನು ನೊಂದಾಯಿಸಿ ಯಶಸ್ವಿಗೊಳಿಸಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ ಕುಡಾ ಮಾಜಿ ಅಧ್ಯಕ್ಷ ಅವಿನಾಶ್ ಕುಲಕರ್ಣಿ, ಬಿಜೆಪಿ ಮಂಡಲ ಅಧ್ಯಕ್ಷ ಶ್ರೀನಿವಾಸ್ ದೇಸಾಯಿ, ಯುವ ಮುಖಂಡ ಶಿವ ಅಷ್ಠಗಿ ಯುವ ಮೋರ್ಚಾ ನಗರ ಜಿಲ್ಲಾ ಅಧ್ಯಕ್ಷ ಮಹೇಶ್ ಚವ್ಹಾಣ,

ಬಿಜೆಪಿ ಮುಖಂಡರಾದ ರಾಜು ದೇವದುರ್ಗ, ಸರಣು ಸಜ್ಜನ್, ಚಂದ್ರಕಾಂತ ವಾಲಿ, ಮಡಿವಾಳಪ್ಪ ಮಡಿವಾಳ, ವಿಪ್ರ ಸಮಾಜದ ಹಿರಿಯ ಮುಖಂಡರಾದ ಪಿಎಚ್ ಕುಲಕರ್ಣಿ, ಗೋವಿಂದ ಕುಲಕರ್ಣಿ, ಸೇರಿದಂತೆ ಅನೇಕ ಯುವಕರು ಹಾಜರಿದ್ದರು.

## 12 ರಂದು ಮೈಲಾರಲಿಂಗೇಶ್ವರ ದಸರಾ ಜಾತ್ರಾ ಮಹೋತ್ಸವ

ಕಲಬುರಗಿ, ಮೈಲಾರಲಿಂಗೇಶ್ವರ ಸೇವಾ ಸಮಾಜದ ವತಿಯಿಂದ ನಗರದ ಜಗತ್ ಮೇಲಿನಕೇರಿಯ ಮೈಲಾರಲಿಂಗೇಶ್ವರ ದೇವಸ್ಥಾನ ಆವರಣದಲ್ಲಿ ಅ.12ರಂದು ಮೈಲಾರಲಿಂಗೇಶ್ವರ ದಸರಾ ಜಾತ್ರಾ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗುವುದು.

ಅಂದು ಬೆಳಿಗ್ಗೆ 10 ಗಂಟೆಗೆ ಶಿವಾನುಭವ ಚಿಂತನ ಗೋಷ್ಠಿ ನಡೆಯಲಿದ್ದು, ಗದ್ದುಗೆ ಮಠದ ಚರಲಿಂಗ ಮಹಾಸ್ವಾಮಿಗಳು ಸಾನಿಧ್ಯವಹಿಸುವರು. ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಶಾಸಕ ಅಲ್ಲಮಪ್ರಭು ಪಾಟೀಲ ಅವರನ್ನು ಸನ್ಮಾನಿಸಲಾಗುವುದು.

ನಂತರ ಮೈಲಾರಲಿಂಗೇಶ್ವರ ದೇವಸ್ಥಾನದಿಂದ ಸಕಲ ವಾದ್ಯ ವೈಭವಗಳೊಂದಿಗೆ ಶಮಿ ಪೂಜೆಗೆ ಹೋಗಲಾಗುವುದು.

## ಫಾಬರೇ ಲೇಔಟ್ ನಲ್ಲಿ ಯೋಗಾ ಕೇಂದ್ರ ಲೋಕಾರ್ಪಣೆ



ಕಲಬುರಗಿ: ಕಲಬುರಗಿ ನಗರದ ಹೃದಯ ಭಾಗದಲ್ಲಿರುವ ವಾರ್ಡ್ ಸಂಖ್ಯೆ 4ರ ಫಾಬರೇ ಲೇಔಟ್ ಉದ್ಯಾನವನದಲ್ಲಿ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದಿಂದ 20 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾದ ಯೋಗಾ ಕೇಂದ್ರವನ್ನು ಶಾಸಕ ಅಲ್ಲಮಪ್ರಭು ಪಾಟೀಲ ಮತ್ತು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್ ಅವರು ಮಂಗಳವಾರ ಉದ್ಘಾಟಿಸಿ ನಿವಾಸಿಗಳಿಗೆ ಅರ್ಪಿಸಿದರು.

ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಅವರು ಅಧ್ಯಕ್ಷರಾದ ಮೇಲೆ ನೆನೆಗುದ್ದಿಗೆ ಬಿದ್ದಿದ್ದ ಈ ಯೋಜನೆಯನ್ನು ಕೈಗೆತ್ತಿಕೊಂಡು ತುಂಬಾ ಮುತುವರ್ಜಿ ವಹಿಸಿ ಮೂರು ತಿಂಗಳಲ್ಲಿಯೇ ಇದನ್ನು ನಿರ್ಮಿಸಿ ಸಾರ್ವಜನಿಕರಿಗೆ ಬಳಕೆಗೆ ಅರ್ಪಿಸುವ ಮೂಲಕ ಸ್ಥಳೀಯ ಬಡಾವಣೆ ನಿವಾಸಿಗಳ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಬಡಾವಣೆಯ ಸಾರ್ವಜನಿಕ ಉದ್ಯಾನವನದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಕಲಬುರಗಿ ಮಹಾನಗರ ಪಾಲಿಕೆಯ ಮಹಾಪೌರರಾದ ಯಲ್ಲಪ್ಪ ಎಸ್. ನಾಯ್ಕೋಡಿ, ಪಾಲಿಕೆ ಸದಸ್ಯೆ ನಿಂಗಮ್ಮ ಕಟ್ಟಿಮನಿ, ಪ್ರಾಧಿಕಾರದ ಆಯುಕ್ತ ಜಿ.ಎಸ್.ಮಳಗಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತ ಸುಭಾಷ ನಾಯಕ್, ಮುಖಂಡರಾದ ಡಾ. ಕಿರಣ ದೇಶಮುಖ, ಫಾರೂಕ ಹೆಚ್., ಲಿಂಗರಾಜ ತಾರಫೈಲ್, ಲಿಂಗರಾಜ ಕಣ್ಣಿ, ಸಂತೋಷ ಪಾಟೀಲ ದನ್ನೂರ, ಮಹಿಪಾಲರೆಡ್ಡಿ ಹಾಗೂ ಬಡಾವಣೆಯ ನಿವಾಸಿಗಳು ಉಪಸ್ಥಿತರಿದ್ದರು.

ಆರ್.ಓ ಪ್ಲ್ಯಾಂಟ್ ಉದ್ಘಾಟನೆ: ಇದೇ ಸಂದರ್ಭದಲ್ಲಿ ಫಾಬರೇ ಲೇಔಟ್ ಸಾರ್ವಜನಿಕ ಉದ್ಯಾನವನದಲ್ಲಿ ದಿ.ಬಾಪೂಗೌಡ ದರ್ಶನಾಪೂರ ಸ್ಮರಣಾರ್ಥಕವಾಗಿ ನೀರು ಶುದ್ದೀಕರಣ ಘಟಕವನ್ನು ಕೊಡುಗೆಯಾಗಿ ನೀಡಿರುವ ಸಣ್ಣ ಕೈಗಾರಿಕೆ ಸಚಿವ ಶರಣಬಸಪ್ಪ ದರ್ಶನಾಪೂರ ಅವರೇ ಖುದ್ದಾಗಿ ಉದ್ಘಾಟಿಸಿ ಸಾರ್ವಜನಿಕರಿಗೆ ಅರ್ಪಿಸಿದರು.

# ಜಿಲ್ಲಾ ಮಟ್ಟದ ಖೋ ಖೋ ಪಂದ್ಯ: ಬೇನಾಳ ಶಾಲೆ ಪ್ರಥಮ



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಸಮೀಪದ ಬೇನಾಳ ಆರ್.ಸಿ.ಗ್ರಾಮದ ಸರಕಾರಿ ಪ್ರಾಥಮಿಕ ಶಾಲಾ ಬಾಲಕಿಯರ ತಂಡ ಇಂಡಿ ತಾಲ್ಲೂಕಿನ ಮಿರಗಿ ಗ್ರಾಮದಲ್ಲಿ ಜರುಗಿದ ಜಿಲ್ಲಾ ಮಟ್ಟದ ಪ್ರಾಥಮಿಕ ಶಾಲೆಗಳ ಖೋಖೋ ಕ್ರೀಡಾಕೂಟದಲ್ಲಿ ಜಯ ಸಾಧಿಸಿ ಪ್ರಥಮ ಸ್ಥಾನ ಪಡೆದುಕೊಂಡಿದೆ. ಪಂದ್ಯಾವಳಿಯಲ್ಲಿ ಅತ್ಯುತ್ತಮ ಸಾಧನೆ ತೋರಿದ ವಿಜೇತ ತಂಡಕ್ಕೆ ಗ್ರಾಮಸ್ಥರು, ಕ್ರೀಡಾಭಿಮಾನಿಗಳು ಅಭಿನಂದಿಸಿದ್ದಾರೆ.

ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಲಾಳಶೀರಿ, ವಿಜಯಪುರ ನಗರ ತಾಲೂಕ ದೈಹಿಕ ಶಿಕ್ಷಣಾಧಿಕಾರಿ ಎಸ್ ಜೆ ಬಿರಾದಾರ, ಜಿಲ್ಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಂ. ಪಾಟೀಲ,ತಾಲೂಕಾ ದೈಹಿಕ ಶಿಕ್ಷಣಾಧಿಕಾರಿ ಎಸ್.ಎಸ್.ಅವಟಿ, ನಿಡಗುಂದಿ ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷರ ಎಸ್.ಎಂ. ಪಾಟಿಲ, ವಿಜಯಪುರ ಜಿಲ್ಲಾ ಕೋಕೋ ಸಂಸ್ಥೆಯ ಗೌರವ ಅಧ್ಯಕ್ಷ ವೀರೇಶ ಗದಗ, ಅಧ್ಯಕ್ಷ ನಾಗಯ್ಯ ಹಿರೇಮಠ, ಪ್ರಧಾನ ಕಾರ್ಯದರ್ಶಿ,- ಎಸ್.ಎಸ್.ಗೌಡರ, ವೀರೇಶ ಸೇರಿದಂತೆ ಸದಸ್ಯರು ಖೋಖೋ ಪಂದ್ಯಾಟದಲ್ಲಿ ಜಯ ದಾಖಲಿಸಿ ಪ್ರಥಮ ಸ್ಥಾನ ಪಡೆದ ಬಾಲಕಿಯರ ತಂಡಕ್ಕೆ ಶುಭ ಹಾರೈಸಿದ್ದಾರೆ.

# ಮಾನಸಿಕ ಆರೋಗ್ಯ ಸದೃಢತೆ ಕಾಪಾಡಿಕೊಳ್ಳಿ :ನ್ಯಾ. ಹಾಗರಗಿ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕಾರ್ಯಕ್ಷೇತ್ರದ ಚಟುವಟಿಕೆಯಲ್ಲಿ ಮಾನಸಿಕ ಒತ್ತಡಗಳಿಂದ ಪಾರಾಗಲು ಓದು, ಸಂಗೀತ, ಧ್ಯಾನ, ಆಟೋಟಗಳಂತಹ ಉತ್ತಮ ಹವ್ಯಾಸಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಮಾನಸಿಕ ಆರೋಗ್ಯ ಸದೃಢತೆ ಹೊಂದಲು ಸಹಾಯವಾಗುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಅರವಿಂದ ಎಸ್. ಹಾಗರಗಿ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್,ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಘಟಕ ಇವರ ಸಹಯೋಗದಲ್ಲಿ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಲ್ಲಿ ಗುರುವಾರ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯ ಪ್ರಯುಕ್ತ 'ಕಾರ್ಯಕ್ಷೇತ್ರದಲ್ಲಿ ಮಾನಸಿಕ ಆರೋಗ್ಯಕ್ಕೆ ಆಧ್ಯತೆ ನೀಡುವ ಸಮಯ ಈಗ ಬಂದಿದೆ' ಎಂಬ ಘೋಷವಾಕ್ಯದಡಿಯಲ್ಲಿ ನಡೆದ ಜಾಥಾ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಮಾನಸಿಕ ಖಿನ್ನತೆಯಿಂದ ಬಳಲುತ್ತಿರುವವರು ಮನಸ್ ಉಚಿತ ಸಹಾಯವಾಣಿ 14416 ಕರೆ ಮಾಡಿ ಆಪ್ತ ಸಮಾಲೋಚನೆ ಪಡೆದಕೊಳ್ಳಬಹುದು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮನೋವೈದ್ಯರು, ಆಪ್ತ ಸಮಾಲೋಚಕರು ಒತ್ತಡ ಮುಕ್ತ ಜೀವನ ನಡೆಸಲು ಉಚಿತ ಸಲಹೆಗಳನ್ನು ನೀಡುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಹೇಳಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸಂಪತ್ ಗುಣಾರಿ ಮಾತನಾಡಿ, ಆರೋಗ್ಯವೇ ಭಾಗ್ಯ ಎಂಬಂತೆ ಸಂಪೂರ್ಣ ಆರೋಗ್ಯ ಕಾಪಾಡಿಕೊಳ್ಳುವುದು ಅತೀ ಅವಶ್ಯಕವಾಗಿದೆ ಎಂದರು.

ಜಾಥಾವು ಶ್ರೀ ದೇವಸ್ಥಾನದಿಂದ ಮಾರುಕಟ್ಟೆ ರಸ್ತೆಯ ಮೂಲಕ ಜಿಲ್ಲಾ ಆರೋಗ್ಯ ಕುಟುಂಬ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣದವರೆಗೆ ನಡೆಯಿತು.

ಈ ವೇಳೆ ತಾಲೂಕಾ ಆರೋಗ್ಯಾಧಿಕಾರಿ ಡಾ. ಪರಶುರಾಮ ಹಿಟ್ನಳ್ಳಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾ-ರಿಗಳಾದ ಜಿ.ಎಂ.ಕೊಲುರ, ಸುರೇಶ ಹೊಸಮನಿ ಸೇ-ರಿದಂತೆ ಜಿಲ್ಲಾ ಮಾನಸಿಕ ಆರೋಗ್ಯ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಸಿಬ್ಬಂದಿಗಳು ಸೇರಿದಂತೆ ತುಳಜಾಭವಾನಿ ನರ್ಸಿಂಗ್ ಕಾಲೇಜ, ಅಶ್ವಿನಿ ನರ್ಸಿಂಗ ಕಾಲೇಜ, ಬಾಂಗಿ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅವೈಜ್ಞಾನಿಕ ಮತದಾರ ಪಟ್ಟಿಗೆ ಪ್ರಾ.ಶಾಲಾ ಶಿಕ್ಷಕರ ಸಂಘ ಖಂಡನೆ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಕರ್ನಾಟಕ ಸರಕಾರಿ ನೌಕರ ಸಂಘದ ನೌಕರರ ಮತದಾರ ಪಟ್ಟಿ ಸಂಪೂರ್ಣ ಅವೈಜ್ಞಾನಿಕವಾಗಿದ್ದು ಅದನ್ನು ತೀವ್ರವಾಗಿ ಖಂಡಿಸುತ್ತೇವೆ. ಅದಲ್ಲದೇ ನಿವೃತ್ತ, ಮೃತ, ವರ್ಗಾವಣೆ, ಸತತ ಗೈರು ಹಾಜರಿದ್ದ ಶಿಕ್ಷಕ ನೌಕರರನ್ನು ಮತದಾರ ಪಟ್ಟಿಯಿಂದ ಕೈ ಬಿಡಬೇಕಾಗಿತ್ತು. ಆದರೆ ಮತದಾರ ಪಟ್ಟಿಯಿಂದ ಕೈ ಬಿಡದೆ ಚುನಾವಣೆ ನಡೆಸುತ್ತಿದ್ದು ಅತ್ಯಂತ ನೋವಿನ ವಿಷಯ. ಈ ಕೂಡಲೇ ಮತದಾರ ಪಟ್ಟಿ ಸರಪಡಿಸಿ ಚುನಾವಣೆ ನಡೆಸಲು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಇಂಡಿ ತಾಲ್ಲೂಕು ಘಟಕದಿಂದ ಆಗ್ರಹಿಸುತ್ತೇವೆ ಎಂದು ಅಧ್ಯಕ್ಷ ವಾಯ್ ಟಿ ಪಾಟೀಲ ಹೇಳಿದರು.

ಬುಧವಾರ ಪಟ್ಟಣದ ಗುರುಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

2024-29ರವರೆಗೆಕರ್ನಾಟಕರಾಜ್ಯಸರಕಾರಿನೌಕರರ ಸಂಘದ ಕಾರ್ಯಾಕಾರಿ ಸಮಿತಿ ಚುನಾವಣೆ ಮತದಾರ ಪಟ್ಟಿ ಉದ್ದೇಶಪೂರ್ವಕವಾಗಿ ಅರ್ಹತಾ ಮತದಾರರನ್ನು ಹೊರತು ಪಡಿಸಿ, ಅವರಿಗೆ ಅನುಕೂಲವಾಗುವಂತೆ ಮತದಾರ ಪಟ್ಟಿ ಸಿದ್ದಪಡಿಸಿಕೊಂಡಿದ್ದಾರೆ. ಈ ಸದ್ಯ ಚುನಾವಣೆ ನಾಮ ಪತ್ರ ಸಲ್ಲಿಕೆ ಪ್ರಾರಂಭವಾದರೂ ಮತದಾರ ಪಟ್ಟಿ ಪ್ರಕಟಣೆ ಮಾಡಿರುವುದಿಲ್ಲ. ಇನ್ನೂ ಶಿಕ್ಷಣ ಇಲಾಖೆಗೆ ಘೋಷಣೆಯಾದಂತಹ ಅನುಭಂದ 3 ಪ್ರಕಾರ ಶಿಕ್ಷಣ ಇಲಾಖೆಗೆ ಒಂದೇ ಕ್ಷೇತ್ರ ಇರಬೇಕಾದ ವ್ಯವಸ್ಥೆಯನ್ನು ಇಬ್ಭಾಗ ಮಾಡಿ, (6)1 ಮತ್ತು (6)2 ಹೀಗೆ ಮತದಾರರನ್ನು ವಿಂಗಡಿಸಿ (6)1 ರಲ್ಲಿ 500 ಶಿಕ್ಷಕ ಮತದಾರರಿದ್ದು, 3 ಜನ-ರಿಗೆ ಉಮೇದುವಾರಿಕೆ ಅವಕಾಶ ಮಾಡಿಕೋಡಲಾಗಿದೆ. (6)2 ರಲ್ಲಿ 563 ಶಿಕ್ಷಕ ಮತದಾರರಿದ್ದು 2 ಜನ ಉಮೇದುವಾರಿಕೆಗೆ ಅವಕಾಶ ಮಾಡಿಕೊಡಲಾಗಿದ್ದು ಸಮಸ್ಯಾತ್ಮಕ ವಿಚಾರವಾಗಿದೆ. ಅದಲ್ಲದೇ ಯಾವ ಮತದಾರ ಆಡಳಿತ ಮಂಡಳಿಗೆ ಜೈ ಎನ್ನುತ್ತಾರೆವೋ (6)1 ಪಟ್ಟಿಯಲ್ಲಿ ಸೇರ್ಪಡೆಗೊಳಿಸಿ, ಬೇಡವಾದ ಮತದಾರರನ್ನು (6)2 ಪಟ್ಟಿಯಲ್ಲಿ ಸೇರ್ಪಡಿಸಿ ಹಾಗೂ ಬೇರೆ ಬೇರೆ ಸ್ಥಳಗಳಿಂದ ಬೇರೆ ಬೇರೆ ಸ್ಥಳಗಳಿಗೆ ಸೇರ್ಪಡಿಸಿದ್ದು ಒಂದೇ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ತಮಗೆ ಬೇಕಾದ ಶಿಕ್ಷಕರನ್ನು ಭಾಗ-1ರಲ್ಲಿ ಬೇಡವಾದವರನ್ನು ಭಾಗ-2ರಲ್ಲಿ ಸೇರಿಸಿ ಲೋಪವೆಸಗಿದ್ದು ಕಂಡು ಬರುತ್ತದೆ. ಈ ಕೂಡಲೇ ಎಲ್ಲಾ ನ್ಯೂನತೆಗಳು ಸರಿಪಡಿಸಿ ಚುನಾವಣೆ ನಡೆಸಲು ಆಗ್ರಹಿಸುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎಮ್ ಎಮ್ ವಾಲಿಕಾರ, ಎಸ್ ವಿ ಹರಳಯ್ಯ, ಎ ಎಮ್ ವಾಲಿಕಾರ, ಅಲ್ತಾಫ್ ಬೊರಾಮಣಿ, ಬಿ ಎನ್ ಜಮಾದಾರ, ಎಮ್ ಡಿ ಕಂಠಿಕರ, ಆನಂದ ವಾಲಿಕಾರ, ಟಿ ಜಿ ಕಲ್ಮನಿ,ಬಿ ಎಂ ವಠಾರ,

ಜಿ ಆರ್ ಕಟಕದೊಂಡು, ಎ ಸಿ ಬಡಿಗೇರ, ರವೀಂದ್ರ ಬಿರಾದಾರ,ಸುರೇಶ ಚವ್ಹಾಣ,ಟಿ.ಕೆ ಪೂಜಾರಿ, ಆ ಏ ಗೊಬ್ಬರ, ಜಗದೀಶ್ ಚವಡ್ಯಾಳ, ಎಸ್ ಬಿ ಸರಸಂಬಿ, ಎಂ ಬಿ ಟೆಂಗಳೆ, ರವಿ ಬಿರಾದಾರ ಇನ್ನೂ ಅನೇಕರು ಉಪಸ್ಥಿತ-ರಿದ್ದರು.

# ಭಾರತೀಯ ಅಂಚೆ ಸೇವೆ ದೇಶದ ಅವಿಭಾಜ್ಯ ಅಂಗ : ಬಂಡೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಭಾರತೀಯ ಅಂಚೆ ಸೇವೆ ದೇಶದ ಅವಿಭಾಜ್ಯ ಅಂಗವಾಗಿದ್ದು, ಇದು ವಿಶ್ವದಲ್ಲೇ ಅತಿ ದೊಡ್ಡದಾದ ಸಂಪರ್ಕ ಜಾಲವನ್ನು ಹೊಂದಿದೆ. ತಂತ್ರಜ್ಞಾನ ಬೆಳೆದಂತೆ ಇಂದಿನ ಜನರು ಅಂಚೆ ಸೇವೆಗಳ ಬಳಕೆಯನ್ನು ಕಡಿಮೆ ಮಾಡಿದ್ದು ಕಳವಳಕಾರಿಯಾಗಿದೆ ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.

ಅವರು ಗುರುವಾರದಂದು ನಾಗಠಾಣ ಗ್ರಾಮದ ಅಂಚೆ ಕಚೇರಿಯಲ್ಲಿ ಹಮ್ಮಿಕೊಂಡ 'ರಾಷ್ಟ್ರೀಯ ಅಂಚೆ ದಿನ'ವನ್ನು ಉದ್ದೇಶಿಸಿ ಮಾತನಾಡಿದರು.

ಸಾರ್ವಜನಿಕ ಯೋಜನೆಗಳನ್ನು ಸುಲಭಗೊಳಿಸುವಲ್ಲಿ ಅಂಚೆ ಸೇವೆಗಳ ಪಾತ್ರ ಅನನ್ಯ.ಪ್ರಪಂಚದ ನಾನಾ ಭಾಗಗಳ ಜನತೆ, ಸಂಸ್ಥೆಗಳ ನಡುವಿನ ಸಂಪರ್ಕಕ್ಕೆ ಅತ್ಯಂತ ಹಳೆಯ ಸಾಧನವಾಗಿ ಅಂಚೆ ಸೇವೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಶಾಖಾ ಅಂಚೆ ಅಧಿಕಾರಿ ಹಣಮಂತ ಅರಕೇರಿ ಮಾತನಾಡಿ, ಅಂಚೆ ಇಲಾಖೆ ಉತ್ತಮ ಗ್ರಾಹಕ ಸ್ನೇಹಿಯಾಗಿದ್ದು, ಗ್ರಾಹಕ-ರಿಗೆ ಮತ್ತಷ್ಟು ಸವಲತ್ತುಗಳನ್ನು ಒದಗಿಸುವ ಮೂಲಕ ದೇಶದ ವ್ಯವಸ್ಥೆಯಲ್ಲಿ ಬಹುಮುಖ್ಯ ಪಾತ್ರ ವಹಿಸಿದೆ ಎಂದು ಹೇಳಿದರು. ಸಹಾಯಕ ಅಂಚೆ ಅಧಿಕಾರಿ ಪ್ರಸಾದ ನಾಯ್ಕೋಡಿ, ಯುವ ಮುಖಂಡ ರಾಜು ಕತ್ನಳ್ಳಿ, ಪಿಕೆಪಿಎಸ್ ನಿರ್ದೇಶಕ ಪ್ರಭಾಕರ ಅರಕೇರಿ, ಗ್ರಾಮಸ್ಥರಾದ ಚನ್ನಯ್ಯ ನಂದಿಕೋಲ,

ಶ್ರೀಕಾಂತ ಗುಜ್ಜಲಕರ, ಕಾಶೀನಾಥ ಬಡಿಗೇರ, ಶರಣಪ್ಪ ಬಂಥನಾಳ, ಸಂತೋಷ ಸಂಗೋಗಿ, ಮಲ್ಲಿಕಾರ್ಜುನ ಸಮಗೊಂಡ, ಶರಣಪ್ಪ ಕತ್ನಳ್ಳಿ, ಕಲ್ಲಪ್ಪ ವಾಲೀಕಾರ, ಶಂಕ್ರೆಪ್ಪ ಅರಕೇರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಶಾಖಾ ಅಂಚೆ ಅಧಿಕಾರಿ ಹಣಮಂತ ಅರಕೇರಿ ಅವರನ್ನು ಸನ್ಮಾನಿಸಲಾಯಿತು.

# ಯೋಗ ಮಾಡುವುದರಿಂದ ರೋಗ ನಿರ್ಮೂಲನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಂದವಾಗಿರುವುದು ಮುಖ್ಯವಲ್ಲ ಆನಂದವಾಗಿರುವುದು ಮುಖ್ಯ. ಬದಲಾವಣೆ ನನ್ನಿಂದ ಪ್ರಾರಂಭವಾದಾಗ ಮಾತ್ರ ಅದು ಕಾರ್ಯಸಾಧ್ಯವಾಗುತ್ತದೆ ಎಂದು ಮಹಿಳಾ ವಿವಿಯ ಎನ್.ಎಸ್.ಎಸ್ ಕೋಶದ ಸಂಯೋಜಕ ಪ್ರೊ.ಎ.ಬಿ.ಸುರಪುರ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿಮಹಿಳಾವಿಶ್ವವಿದ್ಯಾನಿಲಯದ ಎನ್.ಎಸ್.ಎಸ್ ಕೋಶದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ "ಸ್ವಚ್ಛತಾ ಹಿ ಸೇವಾ" ಅಂಗವಾಗಿ ಸ್ವಚ್ಛತೆ, ಯೋಗ ಮತ್ತು ಆರೋಗ್ಯ ಎಂಬ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ರೋಗಗಳ ನಿರ್ಮೂಲನೆಗಾಗಿ ನಾವೆಲ್ಲರೂ ಯೋಗ ಮಾಡಬೇಕು ಎಂದರು.

ಇದೇ ಸಂದರ್ಭದಲ್ಲಿ ಜ್ಯೋತಿ ಉಪಾಧ್ಯಾಯ ಮಾತನಾಡಿ, ದೈಹಿಕ, ಮಾನಸಿಕ ಮತ್ತು ಭಾವನಾತ್ಮಕ ಆರೋಗ್ಯ ಕಾಪಾಡಿಕೊಳ್ಳಲು ಯೋಗ ಮತ್ತು ಸ್ವಚ್ಛತೆ ಬಹು ಮುಖ್ಯ ಎಂದರು.

ಇದೇ ಸಂದರ್ಭದಲ್ಲಿ ಪ್ರೊ.ಯು.ಕೆ. ಕುಲಕರ್ಣಿ ಮಾತನಾಡಿ, ವರ್ತಮಾನದ ಒತ್ತಡದ ಬದುಕಿನಲ್ಲಿ ಯಾವ ರೀತಿ ಬದುಕು ಕಂಡುಕೊಳ್ಳಬೇಕು ಎಂಬುದನ್ನು ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ಶಿಕ್ಷಣ ಅಧ್ಯಯನ ವಿಭಾಗದ ವಿದ್ಯಾರ್ಥಿನಿಯರು ಪ್ರಾರ್ಥನಾ ಗೀತೆ ಹಾಡಿದರು. ಸವಿತಾ ನಿರೂಪಿಸಿದರು. ಅಮೃತಾ ಸ್ವಾಗತಿಸಿದರು ಹಾಗೂ ಪವಿತ್ರಾ ವಂದಿಸಿದರು.

# ಆಯ್ಕೆಗಳೇ ನಮ್ಮ ಸಾಧನೆಗೆ ಸೋಪಾನಗಳು

■ ಉದಯರಶ್ಮಿ ದಿನಪತ್ರಿಕೆ

**'ಜಯ್ ನುಡಿ'**
**(ವ್ಯಕ್ತಿತ್ವ ವಿಕಸನ ಲೇಖನ ಮಾಲಿಕೆ)**

■ ಜಯಶ್ರೀ.ಜೆ.ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು,
ಬೆಳಗಾವಿ ಮೊ:9449234142



ನಿನ್ನೆ ಮೊನ್ನೆಯವರೆಗೂ ನಮ್ಮೊಂದಿಗೆ ಹಾಳು ಹರಟೆ ಹೊಡೆಯುತ್ತಿದ್ದವನು ನೋಡು ನೋಡುವುದರಲ್ಲಿ ಯಶಸ್ಸಿನ ಶಿಖರಕ್ಕೆ ತಲುಪಿದ್ದಾನೆ/ಳೆ ಅಂದರೆ ನಂಬಲು ಆಗುತ್ತಿಲ್ಲ. ಕೊನೆ ಬೆಂಚಿನಲ್ಲಿ ಕುಳಿತುಕೊಳ್ಳುತ್ತಿದ್ದವಳು ದೊಡ್ಡ ಅಧಿಕಾರಿ ಆಗಿದ್ದಾಳೆ. ಅದ್ಹೇಗೆ ಸಾಧ್ಯವಾಯಿತು? ನಾವೆಲ್ಲ ಅವಳಿಗಿಂತ ಓದಿನಲ್ಲಿ ಬಹಳ ಮುಂದೆ ಇದ್ದೆವು. ಕಂಪ್ಯೂಟರ್ ಪರದೆ ತೆರೆಯಲು ಬರದವನು ಈಗ ಹೈಟೆಕ್ ಜೀವನ ಸಾಗಿಸುತ್ತಿದ್ದಾನೆ. ಇಂಥ ವಿಚಿತ್ರಗಳನ್ನು ಪಟ್ಟಿ ಮಾಡುತ್ತ ಹೋದರೆ ಹನುಮನ ಬಾಲದಂತೆ ಬೆಳೆಯುತ್ತಲೇ ಹೋಗುತ್ತದೆ. ಹಾಗಾದರೆ ಮೊದಲು ಏನೂ ಇಲ್ಲದ ಪರಿಸ್ಥಿತಿಯಲ್ಲಿದ್ದವರು ನಂತರ ಏನೆಲ್ಲ ಪಡೆಯುವ ಸ್ಥಿತಿಗೆ ಹೇಗೆ ತಲುಪಿದರು ಎಂದು ಯೋಚಿಸಿದರೆ ನಮಗೆ ಉತ್ತರವಾಗಿ ಸಿಕ್ಕುವುದು ನಮ್ಮ ಆಯ್ಕೆಗಳು. ಹುಟ್ಟಿದಾಗ ನಾವೆಲ್ಲ ರಕ್ತ ಮಾಂಸದ ಮುದ್ದೆಗಳು ಬಿಟ್ಟರೆ ಮತ್ತೇನಿಲ್ಲ. ಕಣ್ಣು ಬಿಟ್ಟು ನೋಡುತ್ತ, ಕಿವಿಯಿಂದ ಆಲಿಸುತ್ತ, ಬಾಯಿಯಿಂದ ಆಸ್ವಾದಿಸುತ್ತ, ಮೂಗಿನಿಂದ ಆಘ್ರಾಣಿಸುತ್ತ, ಕೈಗಳಿಂದ ಸ್ಪರ್ಶಿಸುತ್ತ ತೇಟು ಪ್ರಾಣಿಯಂತೆ ಇರುತ್ತೇವೆ. ಹುಟ್ಟುವಾಗ ಎಲ್ಲರೂ ಒಂದೇ ಇದ್ದೆವು ಆದರೆ ನಮ್ಮೆಲ್ಲರ ಬದುಕು ಭಿನ್ನ ವಿಭಿನ್ನ ಹೇಗಾಯ್ತು? ಎನ್ನುವ ಪ್ರಶ್ನೆಗೆ ಸಹಜವಾದ ಉತ್ತರ ನಮ್ಮ ಆಯ್ಕೆಗಳು. ಒಂದೇ ಆಗಿದ್ದ ನಮ್ಮನ್ನು ವಿಭಿನ್ನವಾಗಿಸಿ ರಾರಾಜಿಸುವಂತೆ ಮಾಡುವ ಇಲ್ಲವೇ ಕೆಳಕ್ಕೆ ತಳ್ಳುವ ಆಯ್ಕೆಗಳ ಬಗ್ಗೆ ತಿಳಿಯುವುದು ಅತಿ ಮುಖ್ಯ ಎಂದಂತಾಯಿತು. ಹಾಗಾದರೆ ಉಜ್ವಲ ಭವಿಷ್ಯಕೆ ನಮ್ಮ ಆಯ್ಕೆಗಳು ಹೇಗಿರಬೇಕು ನೋಡೋಣ ಬನ್ನಿ.

### ಉತ್ತಮ ಗೆಳೆಯರು

ಗೆಳೆಯರಿಲ್ಲದ ಜೀವನ ಶೂನ್ಯ. ಒಂದು ಹಾವನ್ನೋ ದುಷ್ಟರನ್ನೋ ಆರಿಸಿಕೊಳ್ಳಬೇಕಾದಾಗ ಹಾವನ್ನೇ ಆರಿಸಿಕೋ. ಹಾವು ಆತ್ಮರಕ್ಷಣೆಗೆ ಮಾತ್ರ ಕಚ್ಚುತ್ತದೆ. ಆದರೆ ದುಷ್ಟರು ನಿಷ್ಕಾರಣವಾಗಿ ಹೆಜ್ಜೆ ಹೆಜ್ಜೆಗೂ ಕಚ್ಚುತ್ತಾರೆ. ದುಷ್ಟರು ಹಾವಿಗಿಂತ ತೀಕ್ಷ್ಣ ವಿಷವುಳ್ಳವರು. ಹಾವಿಗಿಂತ ಅಪಾಯಕಾರಿ. ಹಾವು ಕಚ್ಚಲು ಏನಾದರೂ ಒಂದು ಕಾರಣವಿರಬೇಕು. ದುಷ್ಟರಿಗೆ ಯಾವ ಕಾರಣವೂ ಬೇಕಿಲ್ಲ. ಹಾವಿಗೆ ವಿಷ ಹಲ್ಲಿನಲ್ಲಿ ಮಾತ್ರ ಇರುತ್ತದೆ. ಆದರೆ ದುಷ್ಟರಿಗೆ ಶರೀರವೆಲ್ಲ ವಿಷವೇ ತುಂಬಿರುತ್ತದೆ. ಆದ-ದ್ದರಿಂದ ದುಷ್ಟರನ್ನು ಎಂದೂ ಆಯ್ಕೆ ಮಾಡಿಕೊಳ್ಳಬಾರದು. ಎಂದಿದ್ದಾನೆ ತನ್ನ ಚಾಣಕ್ಯ ನೀತಿಯಲ್ಲಿ. ಲಾಭ ನಿರೀಕ್ಷಿಸಿ ಗೆಳೆತನ ಬಯಸುವವವರನ್ನು ಬಿಟ್ಟು ಬಿಡಿ. ಸ್ನೇಹ ಅತಿ ಮಧುರ; ಸ್ನೇಹ ಅದು ಅಮರ ಎಂದರು ಕವಿ ಕೆ ಎಸ್ ಲಕ್ಷ್ಮೀನಾರಾಯಣಭಟ್ಟರು. ಕಷ್ಟದಲ್ಲಾಗುವವನೇ ನಿಜವಾದ ಸ್ನೇಹಿತ. ಚಟಕ್ಕೆ ತಳ್ಳಿ ಬದುಕನ್ನು ನರಕವಾಗಿಸುವ ಗೆಳೆಯರನ್ನು ಬಿಟ್ಟು ಉತ್ತಮ ಸ್ನೇಹಿತರನ್ನು ಆಯ್ಕೆ ಮಾಡಿ.

### ಕನಸಿನ ಹಿಂದೆ ಓಟ

ಹೊಸ ಹೊಸ ಆಸೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇರುತ್ತವೆ. ಹೀಗಾಗಿಯೇ ಮಾನವನ ಆಸೆಗಳು ಅಪರಿಮಿತವೆಂದು ಹೇಳಲಾಗುವುದು. ಅದು ಸತ್ಯವೂ ಕೂಡ. ಹೊಸ ಹೊಸ ಆಸೆಗಳೇನೋ ಮನದಲ್ಲಿ ಮೂಡುತ್ತವೆ. ಅವುಗಳನ್ನು ಪೂರೈಸಿಕೊಳ್ಳಲು ಅವುಗಳ ಹಿಂದೆ ಓಡಬೇಕು. ಕೆಲವು ಹೆಜ್ಜೆಗಳನ್ನು ಹಾಕುವುದರಲ್ಲಿ ಸುಸ್ತಾಗಿ ಕೆಲವೊಂದಿಷ್ಟು ಆಸೆಗಳನ್ನು ಮೊದಲ ಹಂತದಲ್ಲೇ ಬಿಟ್ಟು ಬಿಡುವುದುಂಟು. ಆದರೆ ಮನದಲ್ಲಿ ಆಳವಾಗಿ ಬೇರೂರಿದ ಆಸೆಯನ್ನು ಪೂರೈಸಿಕೊಳ್ಳಲು ಅದೆಷ್ಟೋ ಕಷ್ಟವೆನಿಸಿದರೂ ಅದನ್ನು ಬಿಡದೇ ಪಡೆದು ತೀರಬೇಕೆಂಬ ಕನಸಿನ ಬೆನ್ನು ಹತ್ತಬೇಕು. ಬದುಕಿನ ವೇಗ ತೀವ್ರವಾಗಿ ಹೆಚ್ಚುತ್ತಿದೆ. ಆದ್ದರಿಂದ ಕನಸಿನ ಹಿಂದೆ ನಿರಂತರ ಓಟದ ಆಯ್ಕೆ ಮಾಡಬೇಕು.



### ಆತ್ಮವಿಶ್ವಾಸ

ಆತ್ಮವಿಶ್ವಾಸಕ್ಕಿಂತ ಮಿಗಿಲಾದ ಸಾಧನೆಯ ನಿಯಮವಿಲ್ಲ. ನಮ್ಮ ಮೇಲೆ ನಮಗಿರುವ ವಿಶ್ವಾಸವು ತಪಗಳಲ್ಲೇ ಮಿಗಿಲಾದುದು. ಯಾರಲ್ಲಿ ಆತ್ಮವಿಶ್ವಾಸವು ಬಲವಾಗಿದೆಯೋ ಅವನೇ ಶ್ರೇಷ್ಠನಾಗುವನು. ನಿರೀಕ್ಷೆಗೂ ಮೀರಿ ಗೆಲುವು ಪಡೆಯುವನು. ಆತ್ಮವಿಶ್ವಾಸವಿಲ್ಲದಿದ್ದರೆ ಮನಸ್ಸಿಗೆ ಅಂಗವಿಕಲತೆ ಬಂದಂತೆ. ಆತ್ಮವಿಶ್ವಾಸವಿದ್ದರೆ ಸಾಕು ಯಾವುದೇ ಕಷ್ಟ ಬಂದರೂ ಅಂಜಿಕೆಯಿಲ್ಲ ಮನನೋಯುವುದಿಲ್ಲ. ಗಾಯಗೊಂಡರೂ ದುಃಖ ಪಡುವುದಿಲ್ಲ. ಒಮ್ಮೆಲೇ ಮುನಿಸಿಕೊಳ್ಳುವುದೂ ಇಲ್ಲ. "ಆತ್ಮವಿಶ್ವಾಸವಿರುವವರನ್ನು ಎಲ್ಲ ಬಾಗಿಲುಗಳು ಬರಮಾಡಿಕೊಳ್ಳುತ್ತವೆ. ಎಲ್ಲ ನಾಲಿಗೆಗಳು ಪ್ರಶಂಸಿಸುತ್ತವೆ. ಎಲ್ಲ ಗೌರವಗಳೂ ಅವನಿಗೆ ಸಲ್ಲುತ್ತವೆ." ಎಂದಿದ್ದಾನೆ ರಾಲ್ಫ ವಾಲ್ಡೋ ಎಮರ್ಸನ್ ಆದ್ದರಿಂದ ಆತ್ಮವಿಶ್ವಾಸದಿಂದ ಇರುವುದನ್ನು ಕಲಿಯುವುದು ಮುಖ್ಯ. ಕೀಳರಿಮೆ ಬಿಟ್ಟು ಆತ್ಮವಿಶ್ವಾಸವನ್ನು ಆಯ್ಕೆ ಮಾಡಿಕೊಳ್ಳುವುದೇ ಸರಿ.

### ಸಹನೆ

ಸಹನೆಯು ದುಃಖ ದುಮ್ಮಾನಗಳನ್ನು ಲೀಲಾಜಾಲವಾಗಿ ಎದು-ರಿಸುವಂತೆ ಮಾಡುತ್ತವೆ. ದಣಿವು ಬೇಸರಗಳಿಗೆ ಜಾಗವಿಲ್ಲದಂತೆ ಮಾಡುತ್ತವೆ. ಸಹನೆಯಂತಹ ಬಂಧು ಜಗತ್ತಿನಲ್ಲಿ ಬೇರೆ ಇಲ್ಲ. ಏಕೆಂದರೆ ಅದು ನಮ್ಮ ದೃಷ್ಟಿಕೋನ ಆಚಾರ ವಿಚಾರ ಒಲವು ನಿಲುವುಗಳನ್ನು ಪ್ರಭಾವಿಸುತ್ತದೆ. ಅಷ್ಟೇ ಅಲ್ಲ ಅಶಕ್ತನನ್ನು ಶಕ್ತನನ್ನಾಗಿಸಿದ, ಸೋತು ಸುಣ್ಣವಾದವನನ್ನು ಸಾಧಕನನ್ನಾಗಿಸಿದ ನಿದರ್ಶನಗಳಿವೆ. ಏನೂ ಇಲ್ಲದವನನ್ನು ಎಲ್ಲ ಪಡೆಯುವಂತೆ ಮಾಡಿದ ಶ್ರೇಯಸ್ಸು ಸಹನೆಗೆ ಸಲ್ಲುತ್ತದೆ. ಸಹನೆಗೆ ಸಂದ ನೈಜ ಜೀವನದ ಸಾಧಕರ ಕಥೆಗಳು ನಮ್ಮ ಮುಂದಿವೆ.. ಪವಾಡ ಸದೃಶ ದಾಖಲೆಗಳು ಸಾಕಷ್ಟಿವೆ. ಒಟ್ಟಿನಲ್ಲಿ ಬದುಕಿನ ಗುಣಮಟ್ಟವನ್ನು ನಿರ್ಣಯಿಸುವುದರಲ್ಲಿ ಸಹನೆಯ ಪಾತ್ರ ಅಪಾರ.

### ಬದಲಾವಣೆ

ಸಾಮಾನ್ಯವಾಗಿ ನಮ್ಮ ಮನಸ್ಸು ಬದಲಾವಣೆಯನ್ನು ಅಷ್ಟು ಸುಲಭವಾಗಿ ಒಪ್ಪುವುದಿಲ್ಲ. ಹಾಗಂತ ನಾವು ಅದರೊಂದಿಗೆ ನಡೆಯದಿದ್ದರೆ ಬದುಕು ಚೆನ್ನಾಗಿ ನಡೆಯುವುದಿಲ್ಲ. ಬದಲಾಗಲು ಸದಾ ಅವಕಾಶ ಇದ್ದೇ ಇರುತ್ತದೆ. ಬದಲಾವಣೆಗೆ ಇದೇ ವಯಸ್ಸು ಅಂತಿಲ್ಲ. ಯಾವಾಗ ಬೇಕಾದರೂ ಬದಲಾಗಬಹುದು. ಬದಲಾವಣೆಯ ಆಯ್ಕೆಯಲ್ಲಿ ನಮ್ಮ ನಿಲುವು ಹೇಗಿದೆ ಎನ್ನುವುದು ಮುಖ್ಯವಾಗುತ್ತದೆ. ಬದಲಾವಣೆಗೆ ಚಾಚಿಕೊಳ್ಳುವ ಮನಸ್ಥಿತಿಯ ಆಳ ಅಗಲಗಳನ್ನು ಗಮನಿಸಿದಾಗ ಬದುಕಿನ ಗುಣಮಟ್ಟವನ್ನು ನಿರ್ಣಯಿಸಬಹುದು. ಶರೀರವನ್ನು ಬೇಕಾದ ಆಕಾರಕ್ಕೆ ಬದಲಿಸಿಕೊಳ್ಳಲು ಬಯಸುವವರ ಸಂಖ್ಯೆ ಅಧಿಕ ಆದರೆ ಜಿಮ್‌ಗಳಲ್ಲಿ ಫಿಟ್‌ನೆಸ್ ಸೆಂಟರ್‌ಗಳಲ್ಲಿ ಬೆವರು ಹರಿಸಲು ಮುಂದಾಗುವವರ ಸಂಖ್ಯೆ ಕಮ್ಮಿ. ಅದೇ ರೀತಿ ಮನಸ್ಥಿತಿ ಬದಲಿಸಲು ವ್ಯಕ್ತಿ ವಿಕಸನದ ಪುಸ್ತಕಗಳಿವೆ. ಯಶಸ್ವಿ ವ್ಯಕ್ತಿಗಳ ಜೀವನ ಚರಿತ್ರೆಗಳಿವೆ. ಹಿರಿಯರ ಅನುಭವಿಕರ ಜ್ಞಾನಿಗಳ ನುಡಿಮುತ್ತುಗಳಿವೆ. ಸೋಲುಗಳಿಂದ ಕಲಿತ ಪಾಠಗಳಿವೆ. ಇವೆಲ್ಲವುಗಳು ನಮ್ಮ ಮುಂದೆ ಇದ್ದರೂ ಪುನಃ ಪುನಃ ಜೀವನದ ಗುಣಮಟ್ಟ ಕೆಳಕ್ಕೆ ಕುಸಿಯುತ್ತಿರುವುದೇಕೆ? ಏಕೆಂದರೆ ನಾವು ಎಂತಹ ಗುಣಮಟ್ಟದ ಬದುಕನ್ನು ಬದುಕಬೇಕೆನ್ನುವುದರ ಬಗ್ಗೆ ಯೋಚಿಸುವುದೇ ಇಲ್ಲ. ಮುಂದೂಡುವುದನ್ನು ಬಿಟ್ಟು ಬದಲಾಗಲು ಮುಂದಾಗಬೇಕು.

### ಅವಕಾಶಗಳು

ಇಷ್ಟ ಬಂದ ಕ್ಷೇತ್ರಗಳಲ್ಲಿ ಸಾಕಷ್ಟು ಎನಿಸುವಷ್ಟು ಅವಕಾಶಗಳಿವೆ ಹೆಚ್ಚಿನ ಪ್ರತಿಭೆಯಿಲ್ಲ ಅರ್ಹತೆಯಿಲ್ಲ ಭಾಷಾ ಪ್ರೌಢಿಮೆಯಿಲ್ಲ ಎಂದು ಅವಕಾಶಗಳನ್ನು ಬಿಡಬಾರದು. ನಿಮ್ಮ ಸಾಮರ್ಥ್ಯದದಲ್ಲಿ ನಂಬಿಕೆ ಇಡಬೇಕು. ಸಾಮರ್ಥ್ಯಕ್ಕೆ ತಕ್ಕಂತೆ ಇರುವ ಅವಕಾಶಗಳನ್ನು ಆಯ್ಕೆ ಮಾಡಿಕೊಳ್ಳುವ ಜಾಣ್ಮೆ ಮೆರೆಯಬೇಕು. ಇತಿಮಿತಿಗಳ ಸ್ಪಷ್ಟ ಪರಿಕಲ್ಪನೆ ಬೇಕು. ಸಿಕ್ಕ ಅವಕಾಶಗಳ ಬಗ್ಗೆ ಬೇಸರ ಬೇಡ. ನಮ್ಮ ಬದುಕಿನ ಗುಣಮಟ್ಟವನ್ನು ಯಾವ ಅಂಶವು ನಿರ್ಣಯಿಸುತ್ತದೆಂದು ಯೋಚಿಸಿದರೆ ಮೇಲ್ನೋಟಕ್ಕೆ ನಮಗೆ ಅನಿಸುವುದು ಸಿಗುವ ಅವಕಾಶಗಳು. ಸೂಕ್ಷ್ಮವಾಗಿ ಯೋಚಿಸಿದರೆ ನಮ್ಮ ಬದುಕಿನ ಗುಣಮಟ್ಟಕ್ಕೆ ನಮ್ಮ ಆಯ್ಕೆಗಳೇ ಕಾರಣ, ಹೊರತು ಅವಕಾಶಗಳಲ್ಲ



ಎಂದು ಸ್ಪಷ್ಟವಾಗಿ ಗೋಚರಿಸುವುದು. ಹಾಗಾಗಿ ಬದುಕಿನ ಸಾರ್ಥ-ಕತೆಗಾಗಿ, ಯೋಚಿಸಿ, ಅವಲೋಕಿಸಿ ಅಂತರಂಗದಲ್ಲಿ ಮಥಿಸಿ ಆಯ್ಕೆ ಮಾಡಿಕೊಳ್ಳಬೇಕು ಎಂದು ಅನಾಮಿಕ ಹೇಳಿದ್ದಾನೆ. ಮಾನವನ ಬಯಕೆಗಳು ಅಪರಿಮಿತವಾಗಿವೆ. ಆದರೆ ಅವುಗಳನ್ನು ಪೂರೈಸುವ ವಿಧಾನಗಳು ಸೀಮಿತವಾಗಿವೆ.. ಆದ್ದರಿಂದ ಉತ್ತಮವಾದುದನ್ನು ಆಯ್ಕೆ ಮಾಡಿಕೊಳ್ಳುವುದೇ ಜಾಣತನ.

### ಲೋಕವ್ಯವಹಾರ

ಬದುಕಲು ಲೋಕ ವ್ಯವಹಾರ ತಿಳಿಯುವುದು ಅತಿ ಮುಖ್ಯ. ಪರಸ್ಪರ ಸಹಕಾರ ಮತ್ತು ಸಹಬಾಳ್ವೆಯಿಂದ ಜೀವನ ನಡೆಸಬೇಕೇ ಹೊರತು ಜಗಳ ವೈಷಮ್ಯಗಳಿಗೆ ಆಸ್ಪದ ನೀಡಬಾರದು. ಸಂಬಂಧಿಗಳೊಂದಿಗಿನ ಉತ್ತಮ ಒಡನಾಟವು ನಾನು ಒಬ್ಬಂಟಿಯಲ್ಲ ಎನ್ನುವ ಸುರಕ್ಷಿತ ಭಾವ ಮೂಡಿಸುತ್ತದೆ. ಆಚಾರ್ಯ ಸೋಮದೇವ ಹೇಳಿದಂತೆ "ಲೋಕವ್ಯವಹಾರ ತಿಳಿದವನೇ ಸರ್ವಜ್ಞ, ಲೋಕ ವ್ಯವಹಾರ ಇಲ್ಲದವನು ಎಷ್ಟೇ ಬುದ್ಧಿವಂತನಾದರೂ ಕಡೆಗಣಿಸಲ್ಪಡುತ್ತಾನೆ. ಆದ್ದ-ರಿಂದ ಲೋಕವ್ಯವಹಾರ ಹೆಚ್ಚಿಸುವುದರತ್ತ ಗಮನ ನೀಡಬೇಕು.

### ಕೊನೆ ಹನಿ

"ಇರುವುದೆಲ್ಲವ ಬಿಟ್ಟು ಇರದುದರೆಡೆಗೆ ತುಡಿಯುವುದೇ ಜೀವನ" ಎಂಬ ಗೋಪಾಲ ಕೃಷ್ಣ ಅಡಿಗರ ಮಾತಿನಂತೆ ನಮ್ಮಲ್ಲಿರುವುದನ್ನು ಬಿಟ್ಟು ಇಲ್ಲದ್ದನ್ನು ಹೆಚ್ಚ ಹೆಚ್ಚು ಬಯಸುತ್ತೇವೆ. ಇರುವ ಅನುಕೂಲತೆಗಳನ್ನು ಮರೆತು ಇಲ್ಲದಿರುವ ವಿಚಾರಗಳ ಬಗ್ಗೆ ತಲೆ ಕೆಡಿಸಿಕೊಳ್ಳುತ್ತೇವೆ. ಇಲ್ಲದ್ದನ್ನು ಪಡೆಯುವ ಚಿಂತೆಯಲ್ಲಿ ಇರುವುದನ್ನು ಆಸ್ವಾಧಿಸುವುದನ್ನು ಮರೆತುಬಿಡುತ್ತೇವೆ ಹಳ್ಳಿಯ ಸುಂದರ ಪ್ರಾಕೃತಿಕ ಸೌಲಭ್ಯಗಳ ಜೀವನ ದೂರ ಸರಿಸಿ ಜಂಜಡದ ನಗರ ಜೀವನಕ್ಕೆ ಹಾತೊರೆಯುತ್ತೇವೆ. ನಗರ ಜೀವನಕ್ಕೆ ಒಗ್ಗಿಕೊಳ್ಳಲಾರದೇ ಪ್ರಶಾಂತ ವಾತಾವರಣ ಬೇಕೆಂದು ಬಯಸುತ್ತೇವೆ. ಆದ್ದರಿಂದ ಇರುವುದನ್ನು ಆನಂದಿಸುವ ಗುಣ ಆಯ್ಕೆ ಮಾಡಿಕೊಳ್ಳಬೇಕು. ಇದರೊಂದಿಗೆ ಆಯ್ಕೆಗಳು ಕೆಟ್ಟವಾದಲ್ಲಿ ಉತ್ತಮ ಸಾಮರ್ಥ್ಯವುಳ್ಳ ಮನುಷ್ಯನ್ನನ್ನು ಪ್ರಪಾತಕ್ಕೆ ತಳ್ಳುತ್ತವೆ. ಸಾಮಾನ್ಯನಾಗಿದ್ದರೂ ಆಯ್ಕೆ ಉತ್ತಮವಾಗಿದ್ದರೆ ಬಾಳು ಬೆಳಗಿಸಬಲ್ಲವು. ಸಾಧನೆಗೆ ಸೋಪಾನಗಳು ಆಗಬಲ್ಲವು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR